ಸಂಪುಟ : 8 ಸಂಚಿಕೆ : 244 ಪುಟ : 4 ಬೆಲೆ : 3.00 ಶನಿವಾರ ನವ್ಹೆಂಬರ್ 04, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 244 Pages : 4 Price : 3.00 Saturday November 04, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕರ್ನಾಟಕ ನಾಮಕರಣ ಆಗಲು ಶ್ರಮಿಸಿ ಹೋರಾಡಿದ ಕೆ.ಎಚ್.ಪಾಟೀಲ್ ಮತ್ತು ಎಲ್ಲಾ ಹೋರಾಟದ ಸಂಗಾತಿಗಳನ್ನು ಇಂದು ನಾನು ಸ್ಮರಿಸುತ್ತೇನೆ

# ಹೋರಾಟ-ತ್ಯಾಗ-ಬಲಿದಾನಗಳಿಂದ ಕನ್ನಡ ನಾಡು ಉದಯವಾಗಿದೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಹೋರಾಟ-ತ್ಯಾಗ-ಬಲಿದಾನಗಳಿಂದ ಕನ್ನಡ ನಾಡು ಉದಯವಾಗಿದೆ. ಈ ನಾಡಲ್ಲಿ ಕನ್ನಡತ್ವ ಮತ್ತಷ್ಟು ಆಳವಾಗಿ ಬೇರೂರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಗದಗ ನಗರದಲ್ಲಿ ಏರ್ಪಡಿಸಿದ್ದ "ಕರ್ನಾಟಕ ಸಂಭ್ರಮ-50" ಅದ್ದೂರಿ ಕಾರ್ಯಕ್ರಮವನ್ನು ವೈಭವದ ವೇದಿಕೆಯಲ್ಲಿ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ನಾಮಕರಣ ಆಗಲು ಶ್ರಮಿಸಿ ಹೋರಾಡಿದ ಕೆ.ಎಚ್.ಪಾಟೀಲ್ ಮತ್ತು ಎಲ್ಲಾ ಹೋರಾಟದ ಸಂಗಾತಿಗಳನ್ನು ಇಂದು ನಾನು ಸ್ಮರಿಸುತ್ತೇನೆ.

ಅವತ್ತು ಕೆ.ಹೆಚ್.ಪಾಟೀಲ್, ಇಂದು ಹೆಚ್.ಕೆ.ಪಾಟೀಲ್. ಅವತ್ತು ದೇವರಾಜ ಅರಸು ಕುಳಿತಿದ್ದ ಮುಖ್ಯಮಂತ್ರಿ ಕುರ್ಚಿಯಲ್ಲಿ ಇವತ್ತು ನಾನು ಕುಳಿತಿದ್ದೇನೆ. ಇದೇನು ಕಾಕತಾಳೀಯ ಅಲ್ಲ ಎಂದರು.

ಇಂಗ್ಲಿಷ್‌ನಲ್ಲಿ ಶೇಕ್ಸ್‌ಪಿಯರ್ ಸಾಹಿತ್ಯ ರಚಿಸುವುದಕ್ಕೂ 500 ವರ್ಷಗಳ ಮೊದಲೇ ಕನ್ನಡದಲ್ಲಿ ವಿಶ್ವಮಟ್ಟದ ಅತ್ಯುನ್ನತ ಸಾಹಿತ್ಯ ರಚನೆಯಾಗಿತ್ತು. ಪಂಪನಿಂದ ಹಿಡಿದು ವಚನಕಾರರನ್ನೂ ಸೇರಿಸಿ ಹಲವರು ಅತ್ಯುನ್ನತ ಸಾಹಿತ್ಯ ರಚಿಸಿದ್ದರು ಎಂದು ಕನ್ನಡ ಭಾಷಾ ಹಿರಿಮೆಯನ್ನು ಉದಾಹರಿಸಿದರು.




> ಅವಳಿ ನಗರಕ್ಕೆ 61 ಕೋಟಿ ಕೊಟ್ಟಿದ್ದೇವೆ. ಅಗತ್ಯಬಿದ್ದರೆ ಮತ್ತೆ ಕೊಡುತ್ತೇವೆ ಗದಗ-ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ವ್ಯವಸ್ಥೆಯನ್ನು ಇನ್ನಷ್ಟು ಸಮರ್ಪಕಗೊಳಿಸಲು ಈಗಾಗಲೇ 61 ಕೋಟಿ ನೀಡಿದ್ದೇವೆ. ಅಗತ್ಯಬಿದ್ದರೆ ಮತ್ತಷ್ಟು ಹಣ ಕೊಡಲು ನಮ್ಮ ಸರ್ಕಾರ ಸಿದ್ದವಿದೆ ಎಂದು ಭರವಸೆ ನೀಡಿದರು.
>
> ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರಚಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾಡಳಿತ ಜಂಟಿಯಾಗಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರವಾಸೋದ್ಯಮ ಸಚಿವರೂ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಡಾ.ಎಚ್.ಕೆ.ಪಾಟೀಲ್ ಅವರು ವಹಿಸಿದ್ದರು.

ಕನ್ನಡ ಕಲಿಯದೆಯೂ ಕರ್ನಾಟಕದಲ್ಲಿ ವ್ಯವಹರಿಸಬಹುದು ಎನ್ನುವ ವಾತಾವರಣ ಬದಲಾಗಬೇಕು. ಕನ್ನಡದ ಸಂಸ್ಕೃತಿ ಜತೆಗೆ ನಮ್ಮೆಲ್ಲರಲ್ಲಿ ಕನ್ನಡತನ ಬೇರೂರಬೇಕು. ಆಗ ಮಾತ್ರ ಕನ್ನಡದ ವಾತಾವರಣ ಇಡಿ ನಾಡಿನಲ್ಲಿ ಪಸರಿಸುತ್ತದೆ ಎಂದರು.

ಕನ್ನಡ ಸಂಸ್ಕೃತಿ ಎಂದಾಗ ಬಸವಾದಿ ಶರಣರ ಕಾಯಕ ಸಂಸ್ಕೃತಿಯೂ ಸೇರಿದೆ. ಬಸವಣ್ಣನವರ ಆಶಯದಂತೆ ವರ್ಗರಹಿತ, ಜಾತಿರಹಿತ ಸಮಾಜದ ನಿರ್ಮಾಣ ಮತ್ತು ಈ ಸಮಾಜದ ಅಭಿವೃದ್ಧಿ ನಮ್ಮ ಗುರಿಯಾಗಿದೆ. ಆ ಕಾರಣಕ್ಕೇ ಸರ್ವ ಜಾತಿ-ಧರ್ಮದವರ ಬದುಕನ್ನು ಎತ್ತರಿಸುವ ಗ್ಯಾರಂಟಿ ಕಾರ್ಯಕ್ರಮಗಳನ್ನು ನಾವು ನೀಡಿದ್ದೇವೆ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಸಚಿವರಾದ ಕೆ.ಹೆಚ್. ಮುನಿಯಪ್ಪ, ಶಿವರಾಜ ತಂಗಡಗಿ, ಲಕ್ಷ್ಮೀ ಹೆಬ್ಬಾಳ್ಕರ್, ಬೈರತಿ ಸುರೇಶ್, ಮಂಕಳ ವೈದ್ಯ, ಶರಣ ಪ್ರಕಾಶ್ ಪಾಟೀಲ್, ಶಿವಾನಂದ ಪಾಟೀಲ್, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹಮದ್ ಸೇರಿ ಹಲವಾರು ಶಾಸಕರು, ಇಲಾಖಾ ಕಾರ್ಯದರ್ಶಿಗಳು-ಅಧಿಕಾರಿಗಳು ಉಪಸ್ಥಿತರಿದ್ದರು. ▶▶ 3ನೇ ಪುಟಕ್ಕೆ




> ಹಿಂದೆ ಕೆ.ಹೆಚ್.ಪಾಟೀಲರು ಇಡೀ ಜಿಲ್ಲೆಗೆ ಕುಡಿಯುವ ನೀರು ಕೊಟ್ಟರು. ಅವರ ಪುತ್ರ ಹೆಚ್.ಕೆ.ಪಾಟೀಲರೂ ಇಡೀ ರಾಜ್ಯಕ್ಕೆ ಉತ್ತಮ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಹೀಗಾಗಿ ನಾಮಪತ್ರ ಸಲ್ಲಿಸಿದರೆ ಸಾಕು , ನೀವೆಲ್ಲಾ ಹೆಚ್.ಕೆ.ಪಾಟೀಲರನ್ನು ಗೆಲ್ಲಿಸಬೇಕು. ಇಡೀ ರಾಜ್ಯಕ್ಕೆ ಅಷ್ಟೊಂದು ಕೆಲಸ ಮಾಡಿರುವ ಹೆಚ್.ಕೆ.ಪಾಟೀಲರು ಮತ ಕೇಳಬಾರದು. ನೀವೆಲ್ಲಾ ಅವರನ್ನೂ ಹಾಗೇ ಗೆಲ್ಲಿಸಬೇಕು.
>
> **-ಸಿದ್ದರಾಮಯ್ಯ, ಮುಖ್ಯಮಂತ್ರಿಗಳು.**






ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು "ಕರ್ನಾಟಕ ಸಂಭ್ರಮ-50" ಅದ್ದೂರಿ ಕಾರ್ಯಕ್ರಮವನ್ನು ವೈಭವದ ವೇದಿಕೆಯಲ್ಲಿ ಉದ್ಘಾಟಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರಚಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾಡಳಿತ ಜಂಟಿಯಾಗಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರವಾಸೋದ್ಯಮ ಸಚಿವರೂ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಡಾ.ಎಚ್.ಕೆ.ಪಾಟೀಲ್ ಅವರು ವಹಿಸಿದ್ದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಸಚಿವರಾದ ಕೆ.ಹೆಚ್.ಮುನಿಯಪ್ಪ, ಶಿವರಾಜ ತಂಗಡಗಿ, ಲಕ್ಷ್ಮೀ ಹೆಬ್ಬಾಳ್ಕರ್, ಬೈರತಿ ಸುರೇಶ್, ಮಂಕಳ ವೈದ್ಯ, ಶರಣ ಪ್ರಕಾಶ್ ಪಾಟೀಲ್, ಶಿವಾನಂದ ಪಾಟೀಲ್, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹಮದ್ ಸೇರಿ ಹಲವಾರು ಶಾಸಕರು, ಇಲಾಖಾ ಕಾರ್ಯದರ್ಶಿಗಳು-ಅಧಿಕಾರಿಗಳು ಉಪಸ್ಥಿತರಿದ್ದರು.

# ಕೇಂದ್ರ ಸಚಿವರು ಸಿಗುತ್ತಿಲ್ಲ: ಸಿದ್ದರಾಮಯ್ಯ

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ತೀವ್ರ ಬರಗಾಲವಿದೆ. ರಾಜ್ಯಕ್ಕೆ ಕೇಂದ್ರ ಬರ ಅಧ್ಯಯನ ತಂಡ ಭೇಟಿ ನೀಡಿದೆ. ಸಚಿವ ಕೃಷ್ಣ ಭೈರೇಗೌಡರು ಸಾಕಷ್ಟು ಪ್ರಯತ್ನ ನಡೆಸಿದರೂ ಕೇಂದ್ರ ಸಚಿವರು ಸಿಗುತ್ತಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಅಸಮಾಧಾನ ಹೊರಹಾಕಿದರು.

ಶುಕ್ರವಾರ ಇಲ್ಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿವಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 25 ಜನ ಬಿಜೆಪಿ ಸಂಸದರಿದ್ದರೂ ಕೇಂದ್ರ ನಾಯಕರನ್ನು ಭೇಟಿ ಮಾಡಿ ರಾಜ್ಯದ ಸಮಸ್ಯೆ ಪರಿಹಾರಕ್ಕೆ ಯತ್ನಿಸುವುದನ್ನು ಬಿಟ್ಟು ಬರ ಅಧ್ಯಯನಕ್ಕೆ ಹೊರಟಿದ್ದಾರೆ ಎಂದು ಟೀಕಿಸಿದರು.



ಕಾಂತಾರಾಜು ವರದಿ ಸ್ವೀಕಾರ ಕುರಿತು ಒಕ್ಕಲಿಗ ಸಮುದಾಯದಲ್ಲಿ ಅಸಮಾಧಾನವಿರುವ ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿದ ಸಿದ್ದರಾಮಯ್ಯ, ▶▶ 3ನೇ ಪುಟಕ್ಕೆ

# ೪೫೦ ಹಾಸಿಗೆಗಳ ಜಿಲ್ಲಾಸ್ಪತ್ರೆ ಕಟ್ಟಡ ಲೋಕಾರ್ಪಣೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ನಿರ್ಮಿಸಲಾದ 450 ಹಾಸಿಗೆಗಳ ಸುಸಜ್ಜಿತ ಆಸ್ಪತ್ರೆ ಹಾಗೂ ಕ್ಯಾತಲಾಬನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವೈದ್ಯಕೀಯ ಹಾಗೂ ಉನ್ನತ ಶಿಕ್ಷಣ ಸಚವರಾದ ಶರಣ ಪ್ರಕಾಶ ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಪೌರಾಡಳಿತ ಸಚಿವ ರಹೀಂಖಾನ್, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ, ಜವಳಿ ಮತ್ತು ಸಕ್ಕರೆ ಸಚಿವ ಶಿವಾನಂದ ಪಾಟೀಲ್, ಮೀನುಗಾರಿಕೆ ಸಚಿವ ಮಂಕಾಳ ವೈದ್ಯ, ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ವಿಧಾನ ಪರಿಷತ್ ಉಪ ಸಭಾಪತಿ ರುದ್ರಪ್ಪ ಲಮಾಣಿ, ▶▶ 3ನೇ ಪುಟಕ್ಕೆ



### ಕರ್ನಾಟಕ ಸಂಭ್ರಮ-50: ಕನ್ನಡ ಜ್ಯೋತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಭವ್ಯ ಸ್ವಾಗತ

# ವೀರನಾರಾಯಣ ದೇವಾಲಯದ ಆವರಣದಲ್ಲಿ ಮೆರವಣಿಗೆಗೆ ಸಿಎಂ ಚಾಲನೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರು ರಾಜ್ಯಕ್ಕೆ ಕರ್ನಾಟಕ ರಾಜ್ಯವೆಂದು ನಾಮಕರಣಗೊಂಡು 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಆಚರಿಸುತ್ತಿರುವ ಕನ್ನಡ ಸಂಭ್ರಮ-50ರ ಅಂಗವಾಗಿ ಹಂಪಿಯಿಂದ ಆಗಮಿಸಿದ ಕನ್ನಡ ಜ್ಯೋತಿಯನ್ನು ನಗರದ ಐತಿಹಾಸಿಕ ವೀರನಾರಾಯಣ ದೇವಸ್ಥಾನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅದ್ದೂರಿಯಾಗಿ ಬರಮಾಡಿಕೊಂಡರು.

ಶ್ರೀ ವೀರನಾರಾಯಣನ ಸನ್ನಿಧಿಯಲ್ಲಿ ವಿಶೇಷ ಪೂಜೆ ಸಲ್ಲಿಸಿ, ದರ್ಶನ ಪಡೆದ ಸಿಎಂ ಸಿದ್ದರಾಮಯ್ಯ ಅವರು ಬಳಿಕ ದೇವಸ್ಥಾನದ ಆವರಣದಲ್ಲಿ ನಾಡದೇವತೆ ಭಾವಚಿತ್ರಕ್ಕೆ ಪೂಜೆ ಹಾಗೂ ಪುಷ್ಪಾರ್ಚನೆ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

1973ರ ನ. 3ರಂದು ನಡೆದ ಕರ್ನಾಟಕ ನಾಮಕರಣ ಸಂಭ್ರಮದ ಕಾರ್ಯಕ್ರಮವನ್ನು 2023ರ ನ. 3ರಂದು 50 ವರ್ಷದ ಸುವರ್ಣ ಸಂಭ್ರಮವನ್ನು ಪುನರಪಿಯಾಗಿ ಆಚರಿಸುವ ಮೂಲಕ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಯಿತು. ಜೊತೆಗೆ, 1973ರ ನ. 3ರಂದು ಸಾಗಿದ ಮೆರವಣಿಗೆಯು ಮಾರ್ಗದಲ್ಲಿಯೇ ಸಾಗಿದ್ದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್, ವಿಧಾನಸಭಾಧ್ಯಕ್ಷ ಯು.ಟಿ. ಖಾದರ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಪೌರಾಡಳಿತ ಸಚಿವ ರಹೀಂಖಾನ್, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ,

ಶಾಸಕರಾದ ಜಿ.ಎಸ್. ಪಾಟೀಲ, ಶ್ರೀನಿವಾಸ ಮಾನೆ, ಜೆ.ಟಿ. ಪಾಟೀಲ, ಸರಕಾರದ ಮುಖ್ಯಸಚೇತಕ ಸಲೀಂ ಅಹ್ಮದ್, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿ ಹಲವರು ಇದ್ದರು.

**ಅದ್ದೂರಿ ಮೆರವಣಿಗೆ:** ಮೈಸೂರಿನ ಚಂಡೆ ಮದ್ದಳೆ ಕಲಾತಂಡ ಸೇರಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ 25ಕ್ಕೂ ಹೆಚ್ಚು ಕಲಾತಂಡಗಳು ಮೆರವಣಿಗೆಯುದ್ದಕ್ಕೂ ಕಲಾಪ್ರದರ್ಶನ ನೀಡಿದವು. ಮೈಸೂರು ದಸರಾದಲ್ಲಿ ಪ್ರದರ್ಶನಗೊಂಡ ಸಬರಮತಿ ಆಶ್ರಮ, ಲಕ್ಕುಂಡಿಯ ಬ್ರಹ್ಮಜೀನಾಲಯ ಸ್ತಬ್ಧ ಚಿತ್ರಗಳು ಮೆರವಣಿಗೆಯಲ್ಲಿ ಗತವೈಭವ ಸಾರಿದವು. ನಗರಸಭೆ ವತಿಯಿಂದ ಭುವನೇಶ್ವರಿ, ಸರಕಾರದಿಂದ ಅಧಿಕೃತಗೊಳಿಸಲಾದ ಲಾಂಛನ ಹಾಗೂ ಭುನೇಶ್ವರಿ ದೇವಿ ಮೂರ್ತಿ, ಕುಂಭಹೊತ್ತ ಮಹಿಳೆಯರು, ಶಾಲಾ-ಕಾಲೇಜ್ ವಿದ್ಯಾರ್ಥಿಗಳು ಮೆರವಣಿಗೆಗೆ ರಂಗು ತುಂಬಿದರು.

### ವೀರನಾರಾಯಣ ದೇವಸ್ಥಾನದಲ್ಲಿ ವಿಶೇಷ ಅಲಂಕಾರ

ಕನ್ನಡ ಸಂಭ್ರಮ-50ರ ಹಿನ್ನೆಲೆಯಲ್ಲಿ ನಗರದ ಪುರಾತನ ವೀರನಾರಾಯಣ ದೇವಸ್ಥಾನವನ್ನು ವಿವಿಧ ಹೂಗಳಿಂದ ಅಲಂಕಾರಗೊಳಿಸಲಾಗಿತ್ತು. ವೀರನಾರಾಯಣನಿಗೆ ವಿಶೇಷ ಪೂಜೆ ಜೊತೆಗೆ ಅಲಂಕಾರ ಮಾಡಲಾಗಿತ್ತು. ಕುಮಾರವ್ಯಾಸ ಸ್ತಂಭಕ್ಕೂ ಅಲಂಕಾರ ಮಾಡಲಾಗಿತ್ತು. ಸಿಎಂ ಆಗಮನ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.





## ಸಾಕ್ಷಿ ಸುಭಾಷಿತ

ಉತ್ಸಾಹದಿಂದ ಕೆಲಸ ಮಾಡುವವರು ತನ್ನ ಗುರಿ ಮುಟ್ಟುವಲ್ಲಿ ಯಶಸ್ವಿಯಾಗುತ್ತಾರೆ.

–ವಾಲ್ಮೀಕಿ

## ಸಂಪಾದಕೀಯ

# ಹೆಸರಾಗಿದೆ ಕರ್ನಾಟಕ ಬದುಕಾಗಲಿ ಕನ್ನಡ

ನಾಡಿನಾದ್ಯಂತ ಕನ್ನಡ ರಾಜ್ಯೋತ್ಸವ ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಣೆಗೊಂಡಿದೆ. ಅದರ ಜೊತೆಗೆ ಈ ಬಾರಿ ಕರ್ನಾಟಕ ನಾಮಕರಣದ ಸುವರ್ಣ ಮಹೋತ್ಸವವೂ ಸೇರಿಕೊಂಡಿರುವುದರಿಂದ ಕನ್ನಡ ಹಬ್ಬ ಮತ್ತಷ್ಟು ಕಳೆಕಟ್ಟಿದೆ.

ನವಂಬರ್ 3ಕ್ಕೆ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷ ಪೂರ್ಣಗೊಂಡಿದೆ. ಅಭಿವೃದ್ಧಿಯ ಹರಿಕಾರ ಎಂದೇ ಖ್ಯಾತರಾಗಿದ್ದ ಡಿ. ದೇವರಾಜು ಅರಸು ಕಾಲದಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ಎನ್ನುವ ನಾಮಕರಣವಾಯಿತು.

ಕರ್ನಾಟಕ ನಾಮಕರಣದ ಇತಿಹಾಸ ಏಕೀಕರಣಕ್ಕೆ ನಡೆದ ಹೋರಾಟದಷ್ಟೇ ಮಹತ್ವವಿದೆ. ಅದರಲ್ಲೂ ವಿಶೇಷವಾಗಿ ಗದಗ ಜಿಲ್ಲೆಯ ಜನರ ಕೊಡುಗೆ ದೊಡ್ಡದಿದೆ.

ಏಕೀಕರಣ ಕಾಲಕ್ಕೆ ಹೆಸರಾಗಲಿ ಕರ್ನಾಟಕ, ಉಸಿರಾಗಲಿ ಕನ್ನಡ ಎನ್ನುವ ವಾಕ್ಯ ಕನ್ನಡಿಗರ ಮೂಲ ಮಂತ್ರವಾಗಿತ್ತು. ಕನ್ನಡಿಗರ ಆಶಯದಂತೆ ಕರುನಾಡಿಗೆ ಕರ್ನಾಟಕ ಎನ್ನುವ ಹೆಸರು ನಾಮಕರಣವಾಗಿದೆ.

ಆದರೆ ಕನ್ನಡ ಮಾತ್ರ ಜನರ ಉಸಿರಾಗಿಲ್ಲ. ಅದರಲ್ಲೂ ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಕನ್ನಡಕ್ಕಿಂತ ಅನ್ಯಭಾಷಿಕರ ಸಂಖ್ಯೆ ಹೆಚ್ಚಾಗಿದೆ. ರಾಜ್ಯದ ಇನ್ನಿತರ ಜಿಲ್ಲೆಗಳಿಗೆ ಹೋಲಿಕೆ ಮಾಡಿದರೆ ಬೆಂಗಳೂರಿನಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ ಕಡಿಮೆ. ಇನ್ನು ಕನ್ನಡ ಶಾಲೆಗಳು ಸಹ ಒಂದೊಂದಾಗಿ ಮುಚ್ಚುವ ಹಂತಕ್ಕೆ ಬಂದಿವೆ.

ಭಾಷಾವಾರು ಪ್ರಾಂತಗಳು ಒಗ್ಗೂಡಿ ಮೈಸೂರು ರಾಜ್ಯ ಉದಯವಾಯಿತು. ಮುಂದೆ ಕರ್ನಾಟಕ ಎನ್ನುವ ಹೆಸರು ನಾಮಕರಣವಾಯಿತು. ಆದರೂ ರಾಜ್ಯದಲ್ಲಿ ಕನ್ನಡ ಆಡಳಿತ ಭಾಷೆಯಾಗಿ ಪೂರ್ಣ ಪ್ರಮಾಣದಲ್ಲಿ ಜಾರಿಯಾಗಿಲ್ಲ.

ಕರ್ನಾಟಕ ನಾಮಕರಣದ ಈ ಸಂದರ್ಭದಲ್ಲಿ ಆದರೂ ರಾಜ್ಯದಲ್ಲಿ ಕನ್ನಡ ಆಡಳಿತ ಭಾಷೆಯಾಗಿ, ಕಡತಕಷ್ಟೇ ಸೀಮಿತಗೊಳ್ಳದೆ ಆಡಳಿತಾತ್ಮಕವಾಗಿ ಜಾರಿಯಾಗಬೇಕು.

ಪ್ರಾಥಮಿಕ ಶಿಕ್ಷಣವನ್ನ ಕಡ್ಡಾಯವಾಗಿ ಕನ್ನಡ ಮಾಧ್ಯಮದಲ್ಲಿ ನೀಡುವಂತಾಗಬೇಕು. ಅಂದಾಗ ಮಾತ್ರ ಕನ್ನಡ, ಕರ್ನಾಟಕ ಉಳಿಯಲು ಸಾಧ್ಯ.

## ಕನ್ನಡ ರಾಜ್ಯೋತ್ಸವ ಕಾವ್ಯ ಸಂಭ್ರಮ ಉದ್ಘಾಟಿಸಿದ ಡಾ. ರಶ್ಮಿ ಅಂಗಡಿ ಅಭಿಮತ

# ಕನ್ನಡಿಗರ ಭಾಷೆ, ಭಾವನೆ, ಮನಸ್ಸು ಒಂದಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸ್ವಾತಂತ್ರ್ಯ ಸಂಗ್ರಾಮ ಮತ್ತು ಏಕೀಕರಣ ಚಳುವಳಿ ಜೊತೆಜೊತೆಯಾಗಿ ನಡೆದವು. ಅದಕ್ಕಾಗಿ ಮಹಾತ್ಮ ಗಾಂಧೀಜಿ, ಸರ್ದಾರ ವಲ್ಲಭಭಾಯಿ ಪಟೇಲರು ಹಗಲಿರುಳು ಶ್ರಮಿಸಿದರು. ಡಾ. ಬಿ.ಆರ್. ಅಂಬೇಡ್ಕರರು ಸಾಂಸ್ಕೃತಿಕ, ಸಾಮಾಜಿಕ ಹೋರಾಟ ನಡೆಸಿದರೆ, ಮಹಾತ್ಮ ಗಾಂಧೀಜಿಯವರದು ರಾಜಕೀಯ ಹೋರಾಟವಾಗಿತ್ತು. 1956ಕ್ಕಿಂತ ಮೊದಲು ಕನ್ನಡಿಗರು ನೆರೆಹೊರೆಯ ರಾಜರಿಂದ, ಅನ್ಯಭಾಷಿಗರಿಂದ ಆಳಲ್ಪಟ್ಟಿದ್ದರು. ನಂತರ 1948ರಿಂದಲೇ ಭಾಷಾವಾರು ಪ್ರಾಂತ ರಚನೆಯಾಗಬೇಕು ಎಂಬ ಧ್ವನಿ ರಾಷ್ಟ್ರದಲ್ಲಿ ಮೊಳಕೆಯೊಡೆಯಿತು. ಆ ದಿಸೆಯಲ್ಲಿ ಕರ್ನಾಟಕದಲ್ಲಿ ಆ ಕೂಗು ಪ್ರತಿಧ್ವನಿಯಾಗಿ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂಬ ನಾಮಕರಣವಾಯಿತು. ನಮ್ಮ ನೆಲ, ಜಲ, ಭಾಷೆ ಬೆಳೆಯಲು ಪ್ರತಿ ಕನ್ನಡಿಗರ ಭಾವನೆ, ಮನಸ್ಸು,



ಭಾಷೆ ಒಂದಾಗಬೇಕೆಂದು ಕಸಾಪ ಗದಗ ತಾಲೂಕು ಘಟಕದ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ ನುಡಿದರು.

ಸ್ಥಳೀಯ ಗ.ಸ.ಜ.ಗಿ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಜರುಗಿದ 'ಕರ್ನಾಟಕ ಸಂಭ್ರಮ–50' ಹಾಗೂ 68ನೇ ಕನ್ನಡ ರಾಜ್ಯೋತ್ಸವ ಆಚರಣೆಯ ಕಾವ್ಯ ಸಂಭ್ರಮದಲ್ಲಿ ಉದ್ಘಾಟಕರಾಗಿ ಆಗಮಿಸಿ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶೈ.ಸ.ಸಮಿತಿ ಚೇರಮ್ ಡಿ.ಬಿ. ಓದುಗೌಡರ ಮಾತನಾಡಿ, ವಿದ್ಯಾರ್ಥಿಗಳು ಕನ್ನಡ ನಾಡು–ನುಡಿಯ ಬಗ್ಗೆ ಜ್ಞಾನ ಪಡೆದುಕೊಳ್ಳಬೇಕು. ಕಲ್ಯಾಣ ಕರ್ನಾಟಕ, ಗಡಿ ಸಮಸ್ಯೆಗಳು ಎಚ್ಚರಿಕೆಯ ಘಂಟೆಗಳು. ಆದ್ದರಿಂದ ಪ್ರತಿಯೊಬ್ಬರೂ ಕನ್ನಡಾಭಿಮಾನ ಬೆಳೆಸಿಕೊಳ್ಳಬೇಕೆಂದರು.

ಇನ್ನೋರ್ವ ಅತಿಥಿ ಕೊಪ್ಪಳ ಕೃಷಿ ಇಲಾಖೆ ನಿರ್ದೇಶಕ ಸಹದೇವಪ್ಪ ಯರಗುಪ್ಪ ಮಾತನಾಡಿ, ಕನ್ನಡ ನಾಡು, ನುಡಿ ನಡೆದು ಬಂದ ದಾರಿಯನ್ನು ತಿಳಿಸಿ, ನಾವೆಲ್ಲ ಕನ್ನಡ ನೆಲ, ಜಲವನ್ನು ಗಂಭೀರವಾಗಿ ಸಂರಕ್ಷಣೆ ಮಾಡುತ್ತ ಪರಿಸರ ರಕ್ಷಣೆ ಮಾಡಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಪ್ರಾ. ಎಸ್.ಎ. ದೇಶಪಾಂಡೆ ಮಾತನಾಡಿ, ಕನ್ನಡ ಭಾಷೆಗೆ 2000 ವರ್ಷಗಳ ಪುರಾತನ ಇತಿಹಾಸವಿದೆ. ಕಾಲಘಟ್ಟದಲ್ಲಿ ಹರಿದು ಹಂಚಿಹೋದ ಕರ್ನಾಟಕವನ್ನು ಕನ್ನಡಿಗರ ಅವಿರತ ಶ್ರಮ, ಹೋರಾಟದಿಂದ ಕರ್ನಾಟಕ ಏಕೀಕರಣವಾಗಿ ರೂಪುಗೊಂಡು ಸಾರ್ಥಕವೆನಿಸಿದೆ. ನಮ್ಮ ತನು, ಮನ, ಉಸಿರು ಕನ್ನಡವಾಗಬೇಕು ಎಂದರು. ಕಾರ್ಯಕ್ರಮವು ಕನ್ನಡಾಂಬೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರೊಂದಿಗೆ ಆರಂಭವಾಯಿತು. ವಿದ್ಯಾರ್ಥಿನಿಯರು ಕನ್ನಡ ನಾಡಗೀತೆಯನ್ನು ಗಾಯನ ಮಾಡಿದರು. ಕಾರ್ಯಕ್ರಮದ ಅತಿಥಿ, ಅಧ್ಯಕ್ಷರನ್ನು ಮಾಬೂಬಿ ಭದ್ರಾಪೂರ ಸ್ವಾಗತಿಸಿದರು. ನಿಶಾದ ಪಿಂಜಾರ ಪರಿಚಯಿಸಿದರು. ಕನ್ನಡ ಗೀತ ಗಾಯನದಲ್ಲಿ ಸಂಜನಾ ಹೂಗಾರ, ತೇಜಸ್ವಿನಿ ಸೊರಟೂರ, ಶಶಿಕಲಾ ಗಂಜಲಿ, ಸುಕನ್ಯಾ ಬಡಿಗೇರ ಇವರು ಕರ್ನಾಟಕ ಸರಕಾರ ಸೂಚಿಸಿದ ಐದು ಹಾಡುಗಳನ್ನು ಹಾಡಿದರು. ಯುವ ಗಾಯಕ ಕೃಷ್ಣಾ ಕಡಿಯವರ ಕನ್ನಡ ನಾಡು, ನುಡಿ ಕುರಿತ ಅನೇಕ ಹಾಡುಗಳನ್ನು ಹಾಡಿದರು. ಸೃಷ್ಟಿ ಉಳ್ಳಾಗಡ್ಡಿ ವಂದಿಸಿದರು. ಶ್ರೀದೇವಿ ಮರಿಗೌಡ್ರ ಹಾಗೂ ಮಹಾಲಕ್ಷ್ಮೀ ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

ಕಾವ್ಯ ಸಂಭ್ರಮದಲ್ಲಿ ಭಾಗವಹಿಸಿದ ಕವಿಗಳು ತಮ್ಮ ಕವನಗಳನ್ನು ಮಂಡಿಸಿದರು. ಈ ಸಂಭ್ರಮದಲ್ಲಿ ಮರುಳಸಿದ್ಧಪ್ಪ ದೊಡ್ಡಮನಿ, ಮಹೇಶ ಒಡ್ಡಿನ, ಸಹದೇವ ಯರಗೊಪ್ಪ, ಮಂಗಳಗೌರಿ ಹಿರೇಮಠ, ಶಿಲ್ಪಾ ಮ್ಯಾಗೇರಿ, ಬಸವರಾಜ ನೆಲಜೇರಿ, ರತ್ನಾ ಬದಿ, ಅನಸೂಯಾ ಮಿಟ್ಟಿ, ಗೀತಾ ಹೂಗಾರ, ಸಿದ್ದು ವಡ್ಡವರ, ಭಾಗ್ಯ ಹುರಕಡ್ಲಿ, ಜ್ಯೋತಿ ಹೇರಲಗಿ, ಪ್ರಿಯಾಂಕ ಹನುಮರ, ರಮಾ ಬಸು, ತೇಜಸ್ವಿನಿ ಸೊರಟೂರ, ಜ್ಯೋತಿ ಸುಳ್ಳದ ಮುಂತಾದವು ಭಾಗವಹಿಸಿದ್ದರು.

# ಕನ್ನಡ ಭಾಷೆಯನ್ನು ಎಲ್ಲರೂ ಉಳಿಸಿ ಬೆಳೆಸುವಂತಾಗಲಿ



■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಶರಣರು, ದಾಸರು ಸೇರಿದಂತೆ ಅನೇಕರು ಕನ್ನಡ ಸಾಹಿತ್ಯಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದಾರೆ. ಕಲೆ, ಸಾಹಿತ್ಯ, ಸಂಸ್ಕೃತಿ ಪರಂಪರೆಯನ್ನು ಹೊಂದಿರುವ ಕನ್ನಡ ಭಾಷೆಯನ್ನು ಎಲ್ಲರೂ ಉಳಿಸಿ ಬೆಳೆಸುವ ಕಾರ್ಯ ಮಾಡಬೇಕು ಎಂದು ನಾಡೋಜ ಡಾ. ಅನ್ನದಾನೀಶ್ವರ ಸ್ವಾಮೀಜಿ ಹೇಳಿದರು.

ಪಟ್ಟಣದ ಅನ್ನದಾನೀಶ್ವರ ಹೈಸ್ಕೂಲ್ ಮೈದಾನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು, ಈಗಿನ ಮಕ್ಕಳು ಮೊಬೈಲ್ ಗೀಳು ಬಿಟ್ಟು ಕನ್ನಡ ಸಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗಿಯಾದರೆ ಮಾತ್ರ ಯುವಕ ಭವಿಷ್ಯ ರೂಪಿಸಲು ಸಾಧ್ಯ ಎಂದು ನುಡಿದರು.

ಸುಜಾತ ಬರದೂರ ಉಪನ್ಯಾಸ ನೀಡಿದರು. ತಹಸೀಲ್ದಾರ ಎಂ.ಧನಂಜಯ್, ತಾ.ಪಂ. ಕಾರ್ಯನಿರ್ವಹಕ ವಿಶ್ವನಾಥ ಹೊಸಮನಿ, ಪುರಸಭೆ ಮುಖ್ಯಾಧಿಕಾರಿ ಎಂ.ಎ. ನೂರುಲ್ಲಖಾನ ಉದಯಕುಮಾರ ಯಲಿವಾಳ, ಡಾ. ಬಿ.ಜಿ. ಜವಳಿ, ಕಸಾಪ ಅಧ್ಯಕ್ಷ ಎಂ.ಜಿ. ಗಚ್ಚಣವರ, ನಾಗೇಶ ಹುಬ್ಬಳ್ಳಿ, ಪವನ ಮೇಟಿ, ರಾಜಾಭಕ್ಷೀ ಬೆಟಗೇರಿ, ಜ್ಯೋತಿ ಹಾನಗಲ್, ಸಂತೋಷ ಹಿರೇಮನಿ, ನಾಗರಾಜ ಹೊಂಬಳಗಟ್ಟಿ, ನಾಗರಾಜ ಹಾನಗಲ್ಲ, ಲಕ್ಷ್ಮಣ ತಗಡಿನಮನಿ, ನಾಗರಾಜ ಗುಡಿಮನಿ, ಶಿದ್ದಲಿಂಗಯ್ಯ ಹಿರೇಮಠ, ಎ.ಕೆ. ಮುಲ್ಲಾನವರ, ಎಸ್.ಎಸ್. ಬಿಚ್ಚಾಲಿ, ದೇವು ಹಡಪದ, ನಾಗರಾಜ ಹಳ್ಳಿಕೇರಿ, ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬಿಇಒ ಗಂಗಾಧರ ಅಣ್ಣಿಗೇರಿ ಸ್ವಾಗತಿಸಿದರು. ಮಂಜುನಾಥ ಕುಸುಗಲ್ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ನಂತರ, ವಿವಿಧ ಶಾಲೆಯ ಮಕ್ಕಳಿಂದ ಕನ್ನಡ ನಾಡು–ನುಡಿಯ ವೈಭವ ಬಿಂಬಿಸುವ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

# ನಾಡು, ನುಡಿಗಾಗಿ ಹೋರಾಡುವವರಿಗೆ ಬೆಂಬಲವಾಗೋಣ



■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ರಾಜ್ಯ ಕರ್ನಾಟಕವಾಗಿ ಮರು ನಾಮಕರಣ ಹೊಂದಿದ್ದು ಕನ್ನಡಿಗರಿಗೆ ಅತ್ಯಂತ ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಮಹಿಳಾ ಉಪಾಧ್ಯಕ್ಷೆ ಲಲಿತಾ ಶರಣಪ್ಪ ಗೋಳಗೊಳಕಿ ಹೇಳಿದರು.

ನಗರದ ಗಾಂಧಿ ವೃತದಲ್ಲಿ ಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಕರ್ನಾಟಕ ಏಕೀಕರಣದಲ್ಲಿ ಗದಗ ಜಿಲ್ಲೆ ತನ್ನದೇ ಆದ ಸೇವೆಯನ್ನು ಸಲ್ಲಿಸಿದೆ. ಅಂದಾನಪ್ಪ ದೊಡ್ಡಮೇಟಿಯಂತಹ ನಾಯಕರು ಕರ್ನಾಟಕ ಏಕೀಕರಣದಲ್ಲಿ ಭಾಗವಹಿಸಿದ್ದು ನಮ್ಮ ಜಿಲ್ಲೆಯ ಹೆಮ್ಮೆಯಾಗಿದೆ. ಇಂತಹ ಸಂದರ್ಭದಲ್ಲಿ ಕನ್ನಡ ಧ್ವಜಾರೋಹಣ ನೆರವೇರಿಸುವ ಅವಕಾಶ ನನಗೆ ದೊರೆತಿದ್ದು ಖುಷಿಯ ವಿಚಾರ ಎಂದು ಹೇಳಿದರು. ಭಿನ್ನ ಆಡಳಿತದಲ್ಲಿ ಹಂಚಿಹೋಗಿದ್ದ ಕನ್ನಡ ಭಾಷಿಕ ಪ್ರದೇಶವನ್ನು ಒಂದೇ ಆಡಳಿತದಲ್ಲಿ ತರುವ ಮೂಲಕ ಕನ್ನಡತನ ಬೆಳೆಸಲು ನೆರವಾಗುವ ಏಕೀಕರಣ ಪರಿಕಲ್ಪನೆಯನ್ನು ಹಾಗೂ ಚಿಂತನೆಯನ್ನು ಸ್ವಾತಂತ್ರ್ಯ ಪೂರ್ವದಲ್ಲಿಯೇ ಹುಟ್ಟು ಹಾಕಲಾಗಿತ್ತು. ಕನ್ನಡದ ಅನನ್ಯತೆ, ಅಸ್ಮಿತೆ ಕಂಡುಕೊಳ್ಳಲು ಏಕೀಕರಣ ಒಂದು ಪ್ರಬಲ ಸಾಧನೆವೆಂಬುದನ್ನು ಮನಗಂಡಿದ್ದ ನಮ್ಮ ಹಿರಿಯರು ರಾಷ್ಟ್ರೀಯ ಚಳುವಳಿ ಹಾಗೂ ಏಕೀಕರಣ ಧಾರೆಯು ಜೊತೆ–ಯಾಗಿ ಸಾಗಿದ್ದವು.

ಸ್ವಾತಂತ್ರ ಪೂರ್ವದಲ್ಲಿ ಮೊಳಕೆಯೊಡೆದ ಚೆಲುವ ಕನ್ನಡ ನಾಡಿನ ಕನಸು ಸ್ವಾತಂತ್ರ್ಯ ನಂತರದ ವರ್ಷಗಳಲ್ಲಿ ಸಾಕಾರಗೊಂಡಿದ್ದು, ಕನ್ನಡಿಗರ ಭಾವನೆಗಳನ್ನು ಬೆಸೆದು ಹೆಮ್ಮರವಾಗಿ ಬೆಳೆದಿದೆ ಎಂದರು.

# ಕಾರ್ಮಿಕ ಘಟಕದ ಗದಗ ತಾಲೂಕಾಧ್ಯಕ್ಷರಾಗಿ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಡಾ. ಪಂ. ಪುಟ್ಟರಾಜ ರೈತ ಸಂಘದ ಕಾರ್ಮಿಕ ಘಟಕದ ಗದಗ ತಾಲೂಕಾಧ್ಯಕ್ಷರನ್ನಾಗಿ ಗಣಪತಸಾ ಯಲ್ಲೋಸಾ ಬದಿ ಇವರನ್ನು ನೇಮಕ ಮಾಡಿ ರಾಜ್ಯ ಸಂಸ್ಥಾಪಕ ಅಧ್ಯಕ್ಷರಾದ ಎಂ.ಪಿ. ಮುಳಗುಂದ ಆದೇಶ ಪತ್ರವನ್ನು ಸಂಘದ ಕಾರ್ಯಾಲಯದಲ್ಲಿ ನೀಡಿದರು. ಸದರಿಯವರು ಗದಗ ಜಿಲ್ಲೆಯಲ್ಲಿ ಸಂಘಟನೆಯನ್ನು ಬಲಪಡಿಸಬೇಕೆಂದು ಹಾಗೂ ರೈತರ ಸಮಸ್ಯೆಗಳ ಹೋರಾಟಕ್ಕೆ ಮತ್ತು ಇತರೆ ಅಭಿವೃದ್ಧಿ ಹೋರಾಟಕ್ಕೆ ತಾವು ಸಕ್ರಿಯವಾಗಿ ಭಾಗವಹಿಸಬೇಕೆಂದು ಸೂಚಿಸಿದರು.



ಲಕ್ಕುಂಡಿಯಲ್ಲಿ ಕನ್ನಡ ರಾಜ್ಯೋತ್ಸವ 'ಕರ್ನಾಟಕ ಸುವರ್ಣ ಸಂಭ್ರಮ' ಜ್ಯೋತಿ ಯಾತ್ರೆ ರಥದ ಅದ್ದೂರಿ ಸ್ವಾಗತ ಮೆರವಣಿಗೆಯಲ್ಲಿ ಸರಕಾರಿ ಶಾಲೆಯ ಮಕ್ಕಳು ಕನ್ನಡ ಏಕೀಕರಣಕ್ಕಾಗಿ ಹೋರಾಡಿದ ಮಹನೀಯರ ವೇಷ–ಭೂಷಣಗಳನ್ನು ಧರಿಸಿ ಗಮನ ಸೆಳೆದರು.

# ವಿದ್ಯಾದಾನ ಸಮಿತಿಗೆ ರಾಜ್ಯೋತ್ಸವ ಪ್ರಶಸ್ತಿ: ಅಭಿನಂದನೆ



■ವಿಜಯಸಾಕ್ಷಿ ಸುದ್ದಿ, ಗದಗ

2023ರ ಕರ್ನಾಟಕ ಸಂಭ್ರಮ 50ರ ರಾಜ್ಯೋತ್ಸವ ಪ್ರಶಸ್ತಿಯನ್ನು ಉತ್ತರ ಕರ್ನಾಟಕದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ವಿದ್ಯಾದಾನ ಸಮಿತಿ, ಗದಗ ತನ್ನ ಮುಡಿಗೇರಿಸಿಕೊಂಡಿದೆ.

103 ವರ್ಷಗಳ ಅವಿರತ ಶೈಕ್ಷಣಿಕ ಸೇವೆಗೈಯುತ್ತಾ ಬಂದಿರುವ ಈ ಶಿಕ್ಷಣ ಸಂಸ್ಥೆಯ ಸೇವೆಯನ್ನು ಪರಿಗಣಿಸಿದ ಕರ್ನಾಟಕ ಘನ ಸರ್ಕಾರ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಈ ಪ್ರಶಸ್ತಿಯು 5 ಲಕ್ಷ ರೂಪಾಯಿ ನಗದು, 25 ಗ್ರಾಂ. ಚಿನ್ನದ ಪದಕ, ಪ್ರಶಸ್ತಿ ಫಲಕವನ್ನು ಒಳಗೊಂಡಿದೆ. ಈ ಕಾರಣಕ್ಕಾಗಿ ವಿದ್ಯಾದಾನ ಸಮಿತಿ ಬಾಲಕರ ಪ.ಪೂ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾದಾನ ಸಮಿತಿಯ ಅಧ್ಯಕ್ಷ ಡಿ.ಬಿ ಹುಯಿಲಗೋಳರಿಗೆ ಹಾಗೂ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳರವರಿಗೆ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಾಚಾರ್ಯ ಎಂ.ಸಿ.ಕಟ್ಟಿಮನಿ, ವಿದ್ಯಾದಾನ ಸಮಿತಿ ಕಳೆದ 103 ವರ್ಷಗಳಿಂದ ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ವಿದ್ಯಾದಾನವನ್ನು ಮಾಡುತ್ತಾ ಬಂದಿದೆ. ಅಧ್ಯಕ್ಷರಾದ ಡಿ.ಬಿ.ಹುಯಿಲಗೋಳ, ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳರ ಸೇವೆ ಒಳಗೊಂಡಂತೆ ಹಿಂದಿನ ಹಾಗೂ ಪ್ರಸ್ತುತ ಸೇವೆಗೈಯುತ್ತಿರುವ ಶಿಕ್ಷಕ, ಉಪನ್ಯಾಸಕರ ಹಾಗೂ ಮುಖ್ಯಸ್ಥರ ನಿರಂತರ ಪರಿಶ್ರಮ ಕಾರಣವೆಂದರು.

ಹಿರಿಯ ಉಪನ್ಯಾಸಕರಾದ ಎಸ್.ಐ.ಮೇಟಿ, ಕಿಶೋರಬಾಬು ಜೆ.ನಾಗರಕಟ್ಟಿ, ಜೆ.ಡಿ.ಸಂಶಿ, ಪಿ.ಜೆ. ಕಟ್ಟಿಮನಿ, ಸುಜೀತ ಎಸ್.ಕೆ., ದ್ವಿತೀಯ ದರ್ಜೆ ಸಹಾಯಕರಾದ ವಿನಾಯಕ ಹಂಚಾಟೆ ಉಪಸ್ಥಿತರಿದ್ದು ಅಭಿನಂದನೆ ಸಲ್ಲಿಸಿದರು.

# ಚೈತ್ರಾ ಗೌರಿ 'ಕಿಮ್ಸ್ ಕನ್ನಡತಿ'

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಪಶುಸಂಗೋಪನಾ ಇಲಾಖೆಯಲ್ಲಿ ಅಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಡಾ. ಲಿಂಗಯ್ಯ ಗೌರಿ ಅವರ ಮಗಳು ಚೈತ್ರಾ ಗೌರಿ ಸತತ 2ನೇ ಬಾರಿಗೆ 'ಕಿಮ್ಸ್ ಕನ್ನಡತಿ'ಯಾಗಿ ಹೊರಹೊಮ್ಮಿದ್ದಾಳೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದಲ್ಲಿ ರಾಜ್ಯ–ಕ್ಕೆ ಮೊದಲ ಸ್ಥಾನ ಪಡೆದ ಈ ಪ್ರತಿಭಾವಂತೆ ತನ್ನ ವಿದ್ಯಾಭ್ಯಾಸದಲ್ಲಿ ಪ್ರಗತಿಯ ಹಾದಿಯಲ್ಲಿದ್ದಾಳೆ. ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಎರಡನೆ ವರ್ಷದ ಎಂಬಿಬಿಎಸ್ ಓದುತ್ತಿರುವ ಚೈತ್ರಾ ಕನ್ನಡ ರಾಜ್ಯೋತ್ಸವದ ನಿಮಿತ್ಯ ಅಲ್ಲಿನ ಕನ್ನಡ ಸಂಘವು ಏರ್ಪಡಿಸಿದ್ದ ಒಟ್ಟು ಎಂಟು ಸ್ಪರ್ಧೆಗಳಲ್ಲಿ ಐದರಲ್ಲಿ ಪ್ರಥಮ ಸ್ಥಾನ ಪಡೆದು ಈ ಸಾಧನೆಯನ್ನು ಮಾಡಿದ್ದಾಳೆ.

ಕತೆ, ಕವನ, ವೈದ್ಯಕೀಯ ಲೇಖನ, ರಸಪ್ರಶ್ನೆ, ಚರ್ಚಾಸ್ಪರ್ಧೆ, ಪದಬಂಧ ಹೀಗೆ ಅನೇಕ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆದವು. ಅವುಗಳಲ್ಲಿ ಎಂಟು ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ಚೈತ್ರಾ ಐದರಲ್ಲಿ ಪ್ರಥಮ ಸ್ಥಾನ ಪಡೆಯುವ ಮೂಲಕ ಕಿಮ್ಸ್ ಕನ್ನಡತಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ರಸಪ್ರಶ್ನೆಯ ಖ್ಯಾತ ನಿರೂಪಕ ಡಾ. ನಾ.ಸೋಮೇಶ್ವರ ಅವರು ನಡೆಸಿದ ರಸಪ್ರಶ್ನೆಯಲ್ಲಿ ಚೈತ್ರಾ ನೀಡಿದ ಉತ್ತರಗಳಿಂದ ಸಂತುಷ್ಟರಾಗಿ ಅಭಿನಂದಿಸಿದರು.

ಚೈತ್ರಾ ಅವರ ತಾಯಿ ತ್ರಿವೇಣಿ ಕಂಬಾಳಿಮಠ ಪ್ರೌಢಶಾಲಾ ಶಿಕ್ಷಕಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಚೈತ್ರಾಳ ಈ ಸಾಧನೆಗೆ ಶ್ರೀ ಅನ್ನದಾನೇಶ್ವರ ಸಂಸ್ಥೆಯ ಜ.ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಆಡಳಿತಾಧಿಕಾರಿ ಎನ್.ಆರ್. ಗೌಡರ, ಎಲ್ಲ ಅಂಗ ಸಂಸ್ಥೆಗಳ ಮುಖ್ಯಸ್ಥರು, ಶಿಕ್ಷಕ ಬಳಗದವರು ಮತ್ತು ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

ನವಂಬರ್ 1ರದು ಹುಬ್ಬಳ್ಳಿಯ ಕಿಮ್ಸ್‌ನ ಸಭಾಂಗಣದಲ್ಲಿ ನಡೆದ ವರ್ಣರಂಜಿತ ಸಮಾರಂಭದಲ್ಲಿ ಕಿಮ್ಸ್‌ನ ಪ್ರಾಚಾರ್ಯ ಡಾ. ರಾಮಲಿಂಗಪ್ಪ ಅಂಟರತಾನಿ, ಡಾ. ಈಶ್ವರ ಹೊಸಮನಿ ಮತ್ತಿತರ ಗಣ್ಯರು ಚೈತ್ರಾ ಗೌರಿ ಅವರಿಗೆ ಈ ಪ್ರಶಸ್ತಿಯನ್ನು ವಿತರಿಸಿ, ಶುಭ ಕೋರಿದರು.



## ಗದಗ ಜಿಲ್ಲೆಯ ಜಾನಪದ ಜಂಗಮನಿಗೆ ಒಲಿದ ರಾಜ್ಯೋತ್ಸವ ಪ್ರಶಸ್ತಿ

# ಡಾ. ಶಂಭು ಬಳಿಗಾರರಿಗೆ ಪ್ರಶಸ್ತಿಯ ಗರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದ ಜಾನಪದ ಜಂಗಮ ಎಂದೇ ಚಿರಪರಿಚಿತರಾದ ಡಾ.ಶಂಭು ಬಳಿಗಾರ ಅವರು ಈ ಬಾರಿಯ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿರುವುದು ಈ ಭಾಗದ ಜನರಲ್ಲಿ ಹರ್ಷವನ್ನುಂಟುಮಾಡಿದೆ.

1952ರ ಏ.1ರಂದು ವೀರಭದ್ರಪ್ಪ–ಗಂಗಮ್ಮ ಅವರ ಕಿರಿಯ ಮಗನಾಗಿ ಜನಿಸಿದರು. ಕೃಷಿಕ ಕುಟುಂಬದಲ್ಲಿ ಜನಿಸಿದ ಶಂಭು ಬಳಿಗಾರ ಅವರು ದೇವಿಹೊಸೂರ, ಶಿಗ್ಲಿಯಲ್ಲಿ ಪ್ರಾಥಮಿಕ ಹಂತದ ಶಿಕ್ಷಣ, 1973ರಲ್ಲಿ ಧಾರವಾಡ ಕರ್ನಾಟಕ ಕಾಲೇಜಿನಲ್ಲಿ ಬಿಎ



ಪದವಿ, ಕರ್ನಾಟಕ ವಿಶ್ವವಿದ್ಯಾಲಯದ ಎಂ.ಎ. (ಕನ್ನಡ), ಹೈದ್ರಾಬಾದ್ ಉಸ್ಮಾನಿಯಾ ವಿ.ವಿಯ ಎಂ.ಫಿಲ್ ಪದವೀಧರರು. ಜೋಳದ ರಾಶಿ ದೊಡ್ಡನಗೌಡರ ಸಮಗ್ರ ಅಧ್ಯಯನಕ್ಕೆ ಕಲಬುರ್ಗಿ ಜಿಲ್ಲೆಯ ಗುಲಬರ್ಗಾ ವಿವಿ ಪಿಎಚ್‌ಡಿ ಪಡೆದರು.

ಸುದೀರ್ಘ 37 ವರ್ಷಗಳ ಕಾಲ ಉಪನ್ಯಾಸಕರಾಗಿ, ಸಹಪ್ರಾಧ್ಯಾಪಕರಾಗಿ, ಪ್ರಾಚಾರ್ಯರಾಗಿ ಅನುಪಮ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಡಾ.ಶಂಭು ಬಳಿಗಾರರು ಕರ್ನಾಟಕ ಜಾನಪದ ಅಕಾಡೆಮಿಯ 2022 ಸಾಲಿನ ಜಾನಪದ ತಜ್ಞ ಪ್ರಶಸ್ತಿ ಸೇರಿದಂತೆ ಅನೇಕ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ವಿವಿಧ ಧ್ವನಿ ಸುರುಳಿಗಳು ಜನಮಾನಸದಲ್ಲಿ ಇಂದಿಗೂ ಪ್ರಸಿದ್ಧಿ ಪಡೆದಿವೆ. ಇವರು ಸಾವಿರಾರು ವೈವಿಧ್ಯಮಯ ವೇದಿಕೆಗಳ ಮೂಲಕ ಜಾನಪದ ಜೀವನ ಮೌಲ್ಯಗಳನ್ನು ಜನಮಾನಸದಲ್ಲಿ ಬಿತ್ತಿದವರು.

ತಾಯಿಯ ಜಾನಪದ ಹಾಡು, ತಂದೆಯ ಬಯಲಾಟ ಕಲೆ ಬದುಕು, ಕುಟುಂಬದ ಕೃಷಿ ಕಾಯಕ, ಶಿಗ್ಲಿ ಶ್ರೇಷ್ಠ ಪರಿಸರ ಮತ್ತು ಜಾನಪದ ತೊಟ್ಟಿಲಿನಲ್ಲಿ ನಾನು ಬೆಳೆದೆ. ಜಾನಪದ ರಕ್ತಗತವಾಗಿಯೇ ನನ್ನೊಳಗೆ ಅವಿತುಕೊಂಡಿತ್ತು. ಬಾಗಲಕೋಟಿಯಲ್ಲಿ ವೃತ್ತಿ ಬದುಕಿನ ಜೊತೆಗೆ ಜಾನಪದ ಸೇವೆ ಮೈಗೂಡಿಸಿಕೊಂಡೆ. ಇದೀಗ ಪ್ರಶಸ್ತಿಯಿಂದ ನನ್ನ ಸೇವೆಗೆ ಮತ್ತು ನನ್ನೆಲ್ಲ ಸಾಹಿತ್ಯಾಭಿಮಾನಿಗಳಿಗೆ ಸಂತೃಪ್ತಿ ತಂದಿದೆ.

–ಡಾ.ಶಂಭು ಬಳಿಗಾರ.
ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು.

ನೆಲಮೂಲ ಸಂಸ್ಕೃತಿಯನ್ನು ಪ್ರಸಾರ ಮಾಡುತ್ತ ದೇಶ–ವಿದೇಶಗಳನ್ನು ಸುತ್ತಿದ ಹೆಗ್ಗಳಿಕೆ ಇವರಿಗಿದೆ.

ಬಾಲೇಹೊಸೂರಿನ ಶ್ರೀ ದಿಂಗಾಲೇಶ್ವರಮಠದಲ್ಲಿ ನಡೆದ ಶಿರಹಟ್ಟಿ ತಾಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದರು. ತಮ್ಮ ವೃತ್ತಿಯ ಜೊತೆಗೆ ಹಲವು ಸ್ವತಂತ್ರ ಕೃತಿಗಳನ್ನು ಮತ್ತು ಸಂಪಾದಿತ ಕೃತಿಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಕಾಣಿಕೆಯಾಗಿ ನೀಡಿದ್ದಾರೆ.

# ಖಾಲಿ ನಿವೇಶನಗಳ ಮಾಲೀಕರಿಗೆ ದಂಡ ವಿಧಿಸಲು ಬಿಬಿಎಂಪಿ ಮುಂದು!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದ ಹೊರವಲಯದಲ್ಲಿ ಮಾನವ–ಪ್ರಾಣಿ ಸಂಘರ್ಷದ ಪ್ರಕರಣಗಳು, ವಿಶೇಷವಾಗಿ ಚಿರತೆ ಪ್ರತ್ಯಕ್ಷ ಪ್ರಕರಣಗಳು ವರದಿಯಾಗುತ್ತಿದ್ದು, ಬಫರ್ ವಲಯಗಳಲ್ಲಿನ ಹಲವಾರು ಖಾಲಿ ನಿವೇಶನಗಳು ಆತಂಕಕಾರಿಯಾಗಿವೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬಿಬಿಎಂಪಿ ಅಂತಹ ಆಸ್ತಿ ಮಾಲೀಕರಿಗೆ ಅವರ ಸೈಟ್‌ಗಳನ್ನು ನಿರ್ವಹಿಸದಿದ್ದಕ್ಕಾಗಿ ಅವರ ತೆರಿಗೆಗಳೊಂದಿಗೆ ಅವರ ಮೇಲೆ ಭಾರಿ ದಂಡವನ್ನು ವಿಧಿಸಲು ಕಾನೂನು ಆಯ್ಕೆಗಳನ್ನು ಅನ್ವೇಷಿಸುತ್ತಿದೆ.

ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ಹೋರಾಟ-ತ್ಯಾಗ-ಬಲಿದಾನಗಳಿಂದ ಕನ್ನಡ ನಾಡು ಉದಯವಾಗಿದೆ

▶▶ ಮೊದಲನೇ ಪುಟದಿಂದ

ಗದುಗಿನಲ್ಲಿ ಶುಕ್ರವಾರ ನಡೆದ ಐತಿಹಾಸಿಕ ಕಾರ್ಯಕ್ರಮದಲ್ಲಿ ಭಾಗಿಯಾದ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ ಅಕ್ಕಪಕ್ಕ ಕೂತರೂ ಮಾತನಾಡಿಕೊಳ್ಳದೇ ಮೌನಕ್ಕೆ ಶರಣಾಗಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಯಿತು.

5 ವರ್ಷ ನಾನೇ ಸಿಎಂ ಆಗಿರುತ್ತೇನೆ ಎಂಬ ಸಿದ್ದರಾಮಯ್ಯರ ಹೇಳಿಕೆಯಿಂದ ಡಿಕೆಶಿ ಒಳಗೊಳಗೇ ಅಸಮಾಧಾನಗೊಂಡಿದ್ದಾರೆ ಎಂಬ ಮಾತುಗಳೂ ಕೇಳಿಬಂದವು. ಗದುಗಿನ ವೀರನಾರಾಯಣ ದೇವರ ದರ್ಶನದ ಸಂದರ್ಭದಲ್ಲಿಯೂ ಒಬ್ಬರಿಗೊಬ್ಬರು ಮುಖ ನೋಡಿಕೊಳ್ಳಲಿಲ್ಲ. ಕಾರ್ಯಕ್ರಮದ ರೂವಾರಿ ಎಚ್.ಕೆ. ಪಾಟೀಲ ಸೇರಿದಂತೆ ಹಲವು ಸಚಿವರು ಸಿಎಂಗೆ ಸಾಥ್ ನೀಡಿದರಾದರೂ, ಹಿಂದೆ ಸಾಗುತ್ತಿದ್ದ ಡಿ.ಕೆ. ಶಿವಕುಮಾರ ಏಕಾಂಗಿಯಾಗಿಯೇ ಸಾಗಿದರು.

ಕಾರ್ಯಕ್ರಮದ ಜ್ಯೋತಿ ಬೆಳಗಿಸುವಾಗಲೂ ಸಿಎಂ ಉತ್ತರ, ಡಿಸಿಎಂ ದಕ್ಷಿಣವಾಗಿಯೇ ಇದ್ದರು. ಎಲ್ಲರೂ ಜೊತೆಯಾಗಿ ದೀಪ ಹಚ್ಚುವಾಗ ಕೈಜೋಡಿಸದ ಡಿಸಿಎಂ, ಕೊನೆಯದಾಗಿ ಒಬ್ಬರೇ ಪ್ರತ್ಯೇಕವಾಗಿ ಜ್ಯೋತಿ ಬೆಳಗಿಸಿದರು. ಸಿಎಂ ಸಿದ್ದರಾಮಯ್ಯ ವೇದಿಕೆಯಲ್ಲಿ ಮಾತನಾಡುವಾಗ ಡಿಕೆಶಿ ಹೆಸರು ಹೇಳುವುದನ್ನೇ ಮರೆತು, ಯಾರೋ ನೆನಪಿಸಿದ ಮೇಲೆ ಡಿಕೆಶಿ ಹೆಸರು ಹೇಳಿ, ಮಾತು ಮುಂದುವರೆಸಿದ್ದು, ಕಾಂಗ್ರೆಸ್‌ನ ಜೋಡೆತ್ತುಗಳ ನಡುವೆ ಈ ಪರಿಯ ಮುನಿಸು ನಿರ್ಮಾಣವಾಗಿದೆಯಾ ಅನ್ನಿಸುವಂತಾಗಿತ್ತು.

# ಕೇಂದ್ರ ಸಚಿವರು ಸಿಗುತ್ತಿಲ್ಲ: ಸಿದ್ದರಾಮಯ್ಯ

▶▶ ಮೊದಲನೇ ಪುಟದಿಂದ

ವರದಿ ಇನ್ನು ಸ್ವೀಕಾರವೇ ಆಗಿಲ್ಲ. ಆ ಬಗ್ಗೆ ಚರ್ಚೆ ಏಕೆ ಎಂದು ಮರು ಪ್ರಶ್ನಿಸಿದರು.

ಮುಖ್ಯಮಂತ್ರಿ ಬದಲಾವಣೆ ಕುರಿತು ಮಾಧ್ಯಮ ಪ್ರತಿನಿಧಿಗಳ ವಿರುದ್ಧ ಹರಿಹಾಯ್ದ ಸಿದ್ದರಾಮಯ್ಯ, ನಾನು ಹೇಳೊದೆ ಒಂದು, ನೀವು ಬರೆಯೊದೊ ಇನ್ನೊಂದು. ನಮ್ಮದು ಹೈಕಮಾಂಡ್ ಪಕ್ಷ. ಹೈಕಮಾಂಡ್ ತೀರ್ಮಾನಕ್ಕೆ ಬದ್ಧನಾಗಿರುತ್ತೇನೆ ಎಂದಷ್ಟೆ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಚಿವರಾದ ಎಚ್.ಕೆ. ಪಾಟೀಲ, ಶಿವರಾಜ ತಂಗಡಗಿ ಉಪಸ್ಥಿತರಿದ್ದರು.

# ೪೫೦ ಹಾಸಿಗೆಗಳ ಜಿಲ್ಲಾಸ್ಪತ್ರೆ ಕಟ್ಟಡ ಲೋಕಾರ್ಪಣೆ

▶▶ ಮೊದಲನೇ ಪುಟದಿಂದ

ಶಾಸಕರಾದ ಜಿ.ಎಸ್.ಪಾಟೀಲ್, ಶ್ರೀನಿವಾಸ ಮಾನೆ, ಎಸ್.ವಿ. ಸಂಕನೂರು, ಬಸವರಾಜ ಶಿವಣ್ಣವರ, ಜೆ.ಟಿ.ಪಾಟೀಲ್, ಎನ್.ಎಚ್. ಕೊನರಡ್ಡಿ, ಮಾಜಿ ಲೋಕಸಭಾ ಸದಸ್ಯ ಮಂಜುನಾಥ ಕುನ್ನೂರ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಕರಿಗೌಡರ ಸೇರಿದಂತೆ ಜಿಮ್ಸ್ ವೈದ್ಯಕೀಯ ಹಾಗೂ ಆಡಳಿತ ಸಿಬ್ಬಂದಿ ಇದ್ದರು.

# ಭಾನುವಾರ ಎಂ.ಜಿ. ರಸ್ತೆಯಿಂದ ಬೈಯಪ್ಪನಹಳ್ಳಿ ನಡುವೆ ಮೆಟ್ರೋ ಸೇವೆ ಭಾಗಶ: ಸ್ಥಗಿತ!


■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು


ನವೆಂಬರ್ 5 ಭಾನುವಾರದಂದು ಎಂ.ಜಿ. ರಸ್ತೆಯಿಂದ ಬೈಯಪ್ಪನಹಳ್ಳಿ ನಡುವೆ ಮೆಟ್ರೋ ಸೇವೆ ಭಾಗಶ: ಸ್ಥಗಿತವಾಗಲಿದೆ.

ಹೌದು. ಅಂದು ನೇರಳೆ ಮಾರ್ಗದಲ್ಲಿ ಸ್ವಾಮಿ ವಿವೇಕಾನಂದ ರಸ್ತೆ ಮತ್ತು ಇಂದಿರಾನಗರ ಮೆಟ್ರೋ ನಿಲ್ದಾಣಗಳ ನಡುವೆ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಹೀಗಾಗಿ ಎಂ.ಜಿ. ರಸ್ತೆ ಮತ್ತು ಬೈಯಪ್ಪನಹಳ್ಳಿ ಮೆಟ್ರೋ ನಿಲ್ದಾಣಗಳ ನಡುವಿನ ನೇರಳೆ ಮಾರ್ಗದಲ್ಲಿ ಮೆಟ್ರೋ ರೈಲು ಸೇವೆಗಳು ಬೆಳಗ್ಗೆ 7 ಗಂಟೆಗೆ ಬದಲಾಗಿ 9 ಗಂಟೆಗೆ ಪ್ರಾರಂಭವಾಗಲಿದೆ.

## ರಾಜಸ್ಥಾನ ಮೂಲದ ಪವನ್ ಚೋಪ್ರಾರ ಕನ್ನಡಾಭಿಮಾನ ಎಲ್ಲರಿಗೂ ಮಾದರಿಯಾಗಲಿ

# ಹಿಂದಿ ಭಾಯಿಯ ಕನ್ನಡ ಪ್ರೇಮ




ರಾಮದೇವ ಟ್ರೇಡಿಂಗ ಕಂಪನಿ, ಮುಂಡರಗಿ

> ನಾವು ಕನ್ನಡ ನಾಡಿನಲ್ಲಿ ಇದ್ದೇವೆ. ಎಲ್ಲರೂ ಕನ್ನಡ ಭಾಷೆಯ ಬಗ್ಗೆ ಭಕ್ತಿ, ಶ್ರದ್ಧೆ ಹೊಂದಬೇಕು. ರಾಜಸ್ಥಾನಿಯಾದರೂ ನಾನೊಬ್ಬ ಅಪ್ಪಟ ಕನ್ನಡಿಗ ಎನ್ನುವದಕ್ಕೆ ಹೆಮ್ಮೆ ಆಗುತ್ತದೆ. ಈ ನಾಡಿನಲ್ಲಿ ನಾವು ಇರುವುದು ನಮ್ಮ ಪುಣ್ಯ. ಇಂತಹ ಪವಿತ್ರವಾದ ಕರ್ನಾಟಕದ ಬಗ್ಗೆ, ನೆಲ-ಜಲ-ಭಾಷೆ ಬಗ್ಗೆ ಎಲ್ಲರೂ ಗೌರವ, ಪ್ರೀತಿ, ಅಭಿಮಾನದಿಂದ ಜೀವಿಸಬೇಕು. ನಾವು ನಮ್ಮ ತಂದೆಯವರ ಮಾರ್ಗದರ್ಶದಲ್ಲಿ ವ್ಯವಹಾರದಲ್ಲಿ ಕನ್ನಡದ ಅಂಕಿ ಅಕ್ಷರಗಳನ್ನು ಬಳಕೆ ಮಾಡುತ್ತಿದ್ದೇವೆ.
>
> – ಪವನ್ ಚೋಪ್ರಾ.

> ರಾಜಸ್ಥಾನನದಿಂದ ಬಂದು ನಮ್ಮ ಜೊತೆ ಬೆರೆತು, ನಮ್ಮ ಮಣ್ಣಿನ ಗುಣವನ್ನು ತಮ್ಮಲ್ಲಿ ಬೆಳೆಸಿಕೊಂಡ ವ್ಯಕ್ತಿ ನಮ್ಮ ಪವನ್ ಚೋಪ್ರಾ. ಕನ್ನಡ ನಾಡಲ್ಲಿ ಹುಟ್ಟಿ, ಕನ್ನಡದ ಉಳಿವಿಗಾಗಿ ಇಂದಿಗೂ ತಮ್ಮ ದಲಾಲಿ ಅಂಗಡಿಯಲ್ಲಿ ದಿನನಿತ್ಯ ಕನ್ನಡ ಅಂಕಿಗಳನ್ನು ಬಳಕೆ ಮಾಡುತ್ತಾ ಬಂದಿದ್ದಾರೆ. ಚೋಪ್ರಾರವರು ರೈತರಿಗೆ ಮಾತ್ರವಲ್ಲ, ಪಟ್ಟಣದಲ್ಲಿರುವ ಪ್ರತಿಯೊಬ್ಬರಿಗೂ ಬಹು ಪ್ರೀತಿಯ ವ್ಯಕ್ತಿಯಾಗಿದ್ದಾರೆ. ನಮ್ಮಗೂ ಅವರನ್ನು ನೋಡಿ ಹೆಮ್ಮೆಯ ಆಗುತ್ತದೆ.
>
> – ಬಸವರಾಜ ಬಡಿಗೇರ. ರೈತರು, ಮುಂಡರಗಿ.

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ನವೆಂಬರ್ ಬಂದರೆ ಸಾಕು ರಾಜ್ಯಾದ್ಯಂತ ಕನ್ನಡ ಜಪ ಶುರುವಾಗುತ್ತದೆ. ಕೆಲವರಲ್ಲಿ ಕನ್ನಡ ಪ್ರೇಮ ಜಾಗೃತವಾಗುತ್ತದೆ. ನವೆಂಬರ್ ಮುಗಿಯುತ್ತಿದ್ದಂತೆ ಕನ್ನಡ ಭಾಷಾಭಿಮಾನ ಕ್ರಮೇಣವಾಗಿ ಕಡಿಮೆಯಾಗುತ್ತದೆ. ಆದರೆ ಮುಂಡರಗಿಯ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಮಾತ್ರ ವರ್ಷಪೂರ್ತಿ ಕನ್ನಡದ ಕಹಳೆ ಮೊಳಗುತ್ತಿರುತ್ತದೆ.

ಆದರಿಲ್ಲಿ, ವಿಶೇಷವೆಂದರೆ ರಾಜಸ್ಥಾನ ಮೂಲದ ಪವನ್ ಚೋಪ್ರಾ ಅವರ ಮಾತೃ ಭಾಷೆ ಹಿಂದಿ ಆಗಿದ್ದರೂ ಅಪ್ಪಟ ಕನ್ನಡಿಗರಂತೆಯೇ ಆಗಿದ್ದಾರೆ. ಅವರು ನಿತ್ಯ ವ್ಯವಹಾರದಲ್ಲಿ ಕನ್ನಡ ಅಂಕಿಗಳನ್ನು ಬಳಸುತ್ತಿರುವು ನೋಡಿದರೆ, ಇವರ ಕನ್ನಡ ಪ್ರೀತಿ ಮಾತ್ರ ಅಪ್ಪಟ ಕನ್ನಡಿಗರೂ ಹೆಮ್ಮ ಪಡುವಂತಿದೆ. ಈ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಹೆಚ್ಚಿನ ಪ್ರಮಣದಲ್ಲಿ ಗ್ರಾಮೀಣ ಭಾಗಗಳಿಂದ ರೈತರು ಬರುತ್ತಾರೆ. ಅವರ ತಂದಿರುವ ಕೃಷಿ ಉತ್ಪನ್ನದ ಬೆಲೆ ಹಾಗೂ ಅದರ ಒಟ್ಟು ಮೊತ್ತದ ಲೇಕಶಿಲ್ಕ ಪುಸ್ತಕ ಮತ್ತು ಪಟ್ಟಿಯನ್ನು ಕನ್ನಡದಲ್ಲಿಯೇ ನೀಡುತ್ತಾ ಬಂದಿದ್ದಾರೆ.

ರಾಜ್ಯದ ಬಹುತೇಕ ಜಿಲ್ಲೆ, ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಕಂಪ್ಯೂಟರ್ ಅದರಲ್ಲೂ ಆಂಗ್ಲ ಭಾಷೆಯಲ್ಲಿ ವ್ಯವಹಾರಿಸುತ್ತಾರೆ. ಆದರೆ, ಮುಂಡರಗಿಯ ದಲ್ಲಾಲರು ಹಾಗೂ ಖರೀದಿದಾರರು ಇಂದಿಗೂ ತಮ್ಮ ಎಲ್ಲ ವ್ಯವಹಾರಗಳಲ್ಲಿ ಕನ್ನಡ ಅಂಕಿಗಳನ್ನು ಬಳಸುತ್ತಿರುವುದು ಅನುಕರಣೀಯವಾಗಿದೆ. ಗೊತ್ತಿಲ್ಲದವರಿಗೆ ಚೋಪ್ರಾ ಅವರೇ ಕನ್ನಡ ಅಂಕಿ-ಅಂಶಗಳನ್ನು ಓದಿ ಹೇಳಿ ವಿವರಿಸುತ್ತಾರೆ.

ಇಂತಹ ಯುಗದಲ್ಲಿ ಸ್ಥಳೀಯ ಕೃಷಿ ಉತ್ಪನ್ನ ಮಾರುಕಟ್ಟೆ ಸೇರಿದಂತೆ ಶೇ 50ರಷ್ಟು ದಲ್ಲಾಲರು ಮತ್ತು ಖರೀದಿದಾರರು ತಮ್ಮ ದಿನನಿತ್ಯದ ವ್ಯವಹಾರದಲ್ಲಿ ಕನ್ನಡ ಅಕ್ಷರ ಅಂಕಿ-ಸಂಖ್ಯೆಗಳನ್ನು ಬಳಕೆ ಮಾಡುತ್ತಾರೆ. ಚೋಪ್ರಾ ಅವರು ಪರಿಸರದ ಬಗ್ಗೆ ಕಾಳಜಿ ವಹಿಸಿ ವಿದ್ಯಾರ್ಥಿಗಳ ಜೊತೆ ಸೇರಿ ಸಸಿ ನೆಡವುದು ಮತ್ತು ಪ್ರಾಣಿ-ಪಕ್ಷಿಗಳಿಗೆ ಬೆಸಿಗೆ ಕಾಲದಲ್ಲಿ ನೀರಿನ ವ್ಯವಸ್ಥೆ ಮಾಡುವುದು, ಜಯಂತಿಗಳನ್ನು ಆಚರಿಸುವುದು, ಯುವಕರಿಗೆ ಆದರ್ಶ ವ್ಯಕ್ತಿಯಾಗಿ ತಮ್ಮ ವ್ಯವಹಾರದ ಜೊತೆ ನೆಲ-ಜಲ-ಭಾಷೆ ವಿಷಯದಲ್ಲಿ ಅನೇಕ ಸಮಾಜಮುಖಿ ಕೆಲಸ ಮಾಡುತ್ತಾರೆ.

# ಸಾರ್ವಜನಿಕರ ಅಹವಾಲು ಸ್ವೀಕರಿಸಿದ ಸಿಎಂ



■ ವಿಜಯಸಾಕ್ಷಿ ಸುದ್ದಿ, ಗದಗ

ನಾಗಾವಿಯಲ್ಲಿನ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವದ್ಯಾಲಯದ ಸಭಾಭವನದಲಿ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.



ನಾಗಾವಿಯಲ್ಲಿನ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯದ ಆವರಣದಲ್ಲಿ ಅಧ್ಯಯನ ಶಾಲೆ-2 ಕಟ್ಟಡದ ಶಂಕು ಸ್ಥಾಪನೆಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಉದ್ಘಾಟಿಸಿದರು.

## ದೂದಪೀರಾಂ ದರ್ಗಾ, ಶ್ರೀ ಸೋಮೇಶ್ವರ ದೇವಸ್ಥಾನಕ್ಕೆ ಸಚಿವದ್ವಯರಿಂದ ಭೇಟಿ

# ಮಾನವೀಯತೆಯೇ ಎಲ್ಲ ಧರ್ಮಗಳ ಸಾರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ನಾಡು ವಿವಿಧ ಧರ್ಮ, ಜಾತಿ, ಮತ-ಪಂಥಗಳಿಂದ ಕೂಡಿದ್ದರೂ ವಿವಿಧತೆಯಲ್ಲಿ ಏಕತೆಯನ್ನು ಹೊಂದಿರುವ ಸರ್ವಜನಾಂಗದ ಶಾಂತಿಯ ತೋಟವಾಗಿದೆ. ಇದಕ್ಕೆ ಪೂರಕವೆಂಬಂತೆ ಹಿಂದೂ-ಮುಸ್ಲಿಂ ಭಾವೈಕ್ಯತೆಯ ಕೇಂದ್ರ ಲಕ್ಷ್ಮೇಶ್ವರ ಮತ್ತು ಶಿರಹಟ್ಟಿಯೇ ಸಾಕ್ಷಿ. ಎಲ್ಲ ಧರ್ಮಗಳ ಸಾರ ಮಾನವೀಯತೆಯೇ ಆಗಿದೆ. ಕರುಣೆ, ಸ್ನೇಹ, ಪ್ರೀತಿ, ಸೌಹಾರ್ದತೆಯೊಂದಿಗೆ ಒಗ್ಗಟ್ಟಿನಿಂದ ಬಾಳಬೇಕಾಗಿದೆ ಎಂದು ವಿಧಾನಸಭೆ ಸ್ಪೀಕರ್ ಯು.ಟಿ. ಖಾದರ್ ನುಡಿದರು.

ಗದುಗಿನಲ್ಲಿ ನಡೆದ ಕರ್ನಾಟಕ ನಾಮಕರಣ ಸುವರ್ಣ ಸಂಭ್ರಮೋತ್ಸವಕ್ಕೆ ಆಗಮಿಸಿದ್ದ ವೇಳೆ ಲಕ್ಷ್ಮೇಶ್ವರದ ಐತಿಹಾಸಿಕ ದೂದಪೀರಾಂ ದರ್ಗಾ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಕ್ಕೆ ಪೌರಾಡಳಿತ ಸಚಿವ ರಹೀಂಖಾನ್‌ರೊಂದಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕಮಿಟಿಯವರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಈ ವೇಳೆ ಪೌರಾಡಳಿತ ಸಚಿವ ರಹೀಂಖಾನ್‌ರಿಗೆ ಪಟ್ಟಣದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ನಾನೂ ಬಹುತೇಕ ಕ್ಷೇತ್ರಗಳಿಗೆ ಭೇಟಿ ನೀಡಿದ್ದೇನೆ. ಇಷ್ಟೊಂದು ಹದಗೆಟ್ಟ ರಸ್ತೆ ನೋಡಿರಲಿಲ್ಲ. ಈ ಮೊದಲು ಇಲ್ಲಿನ ಎಂಎಲ್‌ಎ ಯಾರಿದ್ದರು? ಎಂದು ಪ್ರಶ್ನಿಸಿದರು.



> ಪಟ್ಟಣದಲ್ಲಿನ ಹದಗೆಟ್ಟಿರುವ ರಸ್ತೆ ಅಭಿವೃದ್ಧಿ, ಅರ್ಧಕ್ಕೆ ನಿಂತಿರುವ ಒಳಚರಂಡಿ ಯೋಜನೆ, ಕುಡಿಯುವ ನೀರಿನ ಸಮಸ್ಯೆ ಸೇರಿ ಮೂಲಭೂತ ಸೌಲಭ್ಯಗಳ ಕೊರತೆಯ ಬಗ್ಗೆ ಮಾಹಿತಿ ಪಡೆದಿದ್ದೇನೆ. ಬೇರೆ ತಾಲೂಕಿಗೆ ಹೋಲಿಸಿದರೆ ಕ್ಷೇತ್ರ ಇಷ್ಟೊಂದು ಹಿಂದುಳಿದಿರುವುದ್ಯಾಕೆ ಎಂಬುದು ಬೇರೆ ವಿಷಯವಿದೆ. ಅದೇನೇ ಇರಲಿ ಈಗ ನಾನು ಈ ಬಗ್ಗೆ ಜಿಲ್ಲಾ ಉಸ್ತುವಾರಿ ಮತ್ತು ಕ್ಷೇತ್ರದ ಶಾಸಕರೊಂದಿಗೆ ಚರ್ಚಿಸಿ ಪಟ್ಟಣದ ಅಭಿವೃದ್ಧಿ ಕಾರ್ಯಗಳಿಗೆ ಒತ್ತು ನೀಡಲು ಮುಂದಾಗುತ್ತೇನೆ ಎಂದು ಪೌರಾಡಳಿತ ಸಚಿವ ರಹೀಂಖಾನ್ ಹೇಳಿದರು.

ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್‌ನ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನ್‌ಸಾಬ್ ಕಣಕೆ, ದಾದಾಪೀರ ಮುಚ್ಚಾಲೆ, ಚನ್ನಪ್ಪ ಜಗಲಿ, ಎಂ.ಎಂ. ಗದಗ, ಪುರಸಭೆ ಸದಸ್ಯರಾದ ಫಿರ್ದೋಸ್ ಆಡೂರ, ರಾಮು ಗಡದವರ, ಎಸ್.ಕೆ. ಹವಾಲ್ದಾರ, ಮುಸ್ತಾಕಮ್ಮದ್ ಶಿರಹಟ್ಟಿ, ವಿ.ಜಿ. ಪಡಗೇರಿ, ಶಫೀ ಸಿದ್ದಾಪುರ, ಸುರೇಶ ರಾಚನಾಯ್ಕರ, ಸಿದ್ದನಗೌಡ ಬಳ್ಳೊಳ್ಳಿ, ಗಂಗಾಧರ ಮೆಣಸಿನಕಾಯಿ, ಬಿ.ಎಸ್. ಬಾಳೇಶ್ವರಮಠ, ವಿರೂಪಾಕ್ಷಪ್ಪ ಆದಿ, ಡಿ.ಬಿ. ಬಳಿಗಾರ ಬಸವರಾಜ ಬೆಂಡಿಗೇರಿ, ಶೇಖಣ್ಣ ಹುರಕಡ್ಲಿ, ಬಸಣ್ಣ ಪುಠಾಣಿ, ಪ್ರಕಾಶ ಕೊಂಚಿಗೇರಿಮಠ, ಮಾಲಾದೇವಿ ದಂಧರಗಿ ಸೇರಿದಂತೆ ಅನೇಕರು ಇದ್ದರು.

# ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಜನರ ಆರ್ಥಿಕ ಸ್ಥಿತಿ ಗಮನಾರ್ಹ ಬೆಳವಣಿಗೆ : ಎಚ್.ಕೆ.ಪಾಟೀಲ




■ ವಿಜಯಸಾಕ್ಷಿ ಸುದ್ದಿ, ಗದಗ

ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾರಿಗೊಳಿದ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯ ಜನರ ಆರ್ಥಿಕ ಸ್ಥಿತಿ ಗಮನಾರ್ಹ ಬೆಳವಣಿಗೆ ಕಂಡಿದೆ ಎಂದು ಸಚಿವ ಎಚ್ ಕೆ ಪಾಟೀಲ ಹೇಳಿದರು.

ಬಡತನ ರೇಖೆಯುಲ್ಲಿದ್ದ ಲಕ್ಷಾಂತರ ಕುಟುಂಬಗಳು ಕೇವಲ ಐದೇ ತಿಂಗಳಲ್ಲಿ ಕೆಳ ಮಧ್ಯಮ ವರ್ಗದಲ್ಲಿ ಗುರುತಿಸಿಕೊಂಡಿದ್ದಾರೆ. ಗೃಹ ಲಕ್ಷ್ಮೀ, ಗೃಹಜ್ಯೋತಿ, ಅನ್ನಭಾಗ್ಯ ಶಕ್ತಿ ಯೋಜನೆಗಳು ಬಡವರ ಮುಖದಲ್ಲಿ ಮಂದಹಾಸ ಮೂಡಿಸಿವೆ ಎಂದರು.

ಗ್ಯಾರಂಟಿ ಯೋಜನೆಗಳು ವಿಶ್ವದಾಖಲೆಯನ್ನು ಮಾಡಿವೆ. ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ ಶ್ರೇಯುಸ್ಸು ಮುಖ್ಯಮಂತ್ರಿ ಸಿದ್ದರಾಮಯ್ಯು ಅವರಿಗೆ ಸಲ್ಲುತ್ತದೆ ಎಂದರು.

ಕರ್ನಾಟಕ ಸುವರ್ಣ ಮಹೋತ್ಸವ ಕಾರ್ಯುಕ್ರಮ ನಿಮಿತ್ತ ಗದಗ ನಗರದಲ್ಲಿ ತಾಯಿ ಭುವನೇಶ್ವರಿಯು ಭವ್ಯ ಮೆರವಣಿಗೆ ನಡೆಯಿತು. ಸಿಎಂ ಸಿದ್ದರಾಮಯ್ಯು ಭಾಗವಹಿಸಿದ್ದ ಮೆರವಣಿಗೆಗೆ ಅಭೂಪೂರ್ವ ಸ್ವಾಗತ ಸಿಕ್ಕಿತು. ನೂರಾರು ಮಹಿಳೆಯುರು ಪೂರ್ಣ ಕುಂಭ ದೊಂದಿಗೆ ಮೆರವಣಿಗೆಯಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು ಎಂದರು. ಗದಗ ಜಿಲ್ಲೆಯುಲ್ಲಿ ಗ್ಯಾರಂಟಿ ಯೋಜನೆಯ ನಾಲ್ಕು ಯೋಜನೆಗಳಿಗೆ ಅಪಾರ ಬೆಂಬಲ ಸಿಕ್ಕಿದೆ. ಗೃಹ ಲಕ್ಷ್ಮೀ ಶೇ 91.3, ಗೃಹಜ್ಯೋತಿ ಶೇ 94.21, ಅನ್ನಭಾಗ್ಯ ಶೇ 91 ಹಾಗೂ ಶಕ್ತಿ ಯೋಜನೆಯಡಿ 2 ಕೋಟಿ ಮಹಿಳೆಯುರು ಪ್ರಯೋಜನ ಪಡೆದುಕೊಂಡಿದ್ದಾರೆ. ಶೀಘ್ರದಲ್ಲಿ ನಾಲ್ಕು ಯೋಜನೆಗಳಲ್ಲಿ ಶೇ 100 ಫಲಿತಾಂಶ ತರಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ ಎಂದು ಅವರು ವಿವರಿಸಿದರು.

### ಗದಗ ಕೊಡುಗೆ ಅಪಾರ

ನಾಡು ನುಡಿ ನೆಲ ಜಲಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ. ಸ್ವಾತಂತ್ರ್ಯ ಹೋರಾಟ, ಕರ್ನಾಟಕ ಏಕೀಕರಣ ಹಾಗೂ ಕರ್ನಾಟಕ ನಾಮಕರಣಕ್ಕಾಗಿ ನಡೆದ ಹೋರಾಟಗಳಲ್ಲಿ ಗದಗ ಜಿಲ್ಲೆಯ ಕೊಡುಗೆ ಅಪರಿಮಿತ. ಅನೇಕ ಹೋರಾಟಗಳಿಗೆ ಗದಗ ಬೀಜಾಂಕುರ ಸ್ಥಳ ಎಂದು ಸಚಿವ ಎಚ್ ಕೆ ಪಾಟೀಲ ಹೇಳಿದರು.

1973ರಲ್ಲಿ ಅಂದಿನ ಸಿಎಂ ದೇವರಾಜ ಅರಸ್ ಹಾಗೂ ಗದಗನ ಸಚಿವರಾಗಿದ್ದ ಕೆ ಎಚ್ ಪಾಟೀಲ ಅವರು ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಬೇಕೆಂದು ನಿರ್ಣಯಿಸಿದ್ದು ಇತಿಹಾಸ. ಇದೀಗ 50 ವರ್ಷಗಳ ನಂತರ ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವ ಆಚರಿಸುವ ಅವಕಾಶ ಸಿಕ್ಕಿದ್ದು ತುಂಬಾ ಖುಷಿಯ ಸಂಗತಿ ಎಂದರು.

ಕರ್ನಾಟಕ ಸುವರ್ಣ ಸಂಭ್ರಮ ಗಳಿಗೆಯುಲ್ಲಿ ಗದಗ ಜಿಲ್ಲೆಯು ಮಹನೀಯುರನ್ನು ನೆನೆಯುವುದು ಅತಿಅವಶ್ಯವಾಗಿದ್ದು, ಉದಯುವಾಗಲಿ ಚೆಲುವ ಕನ್ನಡನಾಡು ಎಂದು ಹೇಳಿದ ಕವಿ ಆಲೂರು ವೆಂಕಟರಾಯರನ್ನು ಮರೆಯುವಂತಿಲ್ಲ. ಅದರಂತೆ ಕುಮಾರವ್ಯಾಸ, ನಾಗವರ್ಮ, ದುರ್ಗಸಿಂಹ, ನಯುಸೇನ, ಚಾಮರಸ, ಚನ್ನವೀರ ಕಣವಿ, ಅಂದಾನಪ್ಪ ದೊಡ್ಡಮೇಟಿ, ಕೆ ಎಚ್ ಪಾಟೀಲ, ಎಮ್ ಎಸ್ ಸುಂಕಾಪುರ, ಜಿ ಎಸ್ ಆಮೂರ, ಭಾರತರತ್ನ ಪಂಡಿತ ಭೀಮಸೇನ ಜೋಶಿ, ಪದ್ಮವಿಭೂಷಣ ಡಾ ಪುಟ್ಟರಾಜ ಕವಿ ಗವಾಯಿಗಳು ಅಭಿಮಾನ ಉಕ್ಕುವಂತಹ ಕೊಡುಗೆ ನೀಡಿದ್ದಾರೆ. ಇದಲ್ಲದೇ, ಕೆ ಎಚ್ ಪಾಟೀಲ ಅವರ ನೇತೃತ್ವದಲ್ಲಿ 1961 ಕಸಾಪ ಸಾಹಿತ್ಯ ಸಮ್ಮೇಳನ ನಡೆಸಲಾಯಿತು. ಅದೇ ಸಮ್ಮೇಳನದಲ್ಲಿಯೇ ಮೈಸೂರು ಕರ್ನಾಟಕ ಆಗಬೇಕೆಂದು ಠರಾವು ಪಾಸು ಮಾಡಲಾಯಿತು ಎಂದು ಇತಿಹಾಸವನ್ನು ವಿವರಿಸಿದರು.

ಗದಗ ನಗರಕ್ಕೆ ಐದು ಸಾವಿರ ಹಾಗೂ ಗದಗ ಜಿಲ್ಲೆಗೆ 10 ಸಾವಿರ ಮನೆಗಳನ್ನು ಕೊಡಬೇಕು ಎಂದು ಸಚಿವ ಎಚ್ ಕೆ ಪಾಟೀಲ ಅವರು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದರು. ಎಲ್ಲರಿಗೂ ಸೂರು ಸಿಗಬೇಕು ಎನ್ನುವುದೇ ಇದರ ಮುಖ್ಯ ಉದ್ದೇಶವಾಗಿದೆ. ಬೇರೆ ಏನನ್ನೂ ಕೇಳಲ್ಲ. ಇದೊಂದು ಮನವಿಗೆ ಸ್ಪಂದಿಸಬೇಕು. ಗದಗ ಜಿಲ್ಲೆಯ ಜನರ ವಸತಿ ರಹಿತರ ಸಮಸ್ಯೆಗೆ ಮುಖ್ಯಮಂತ್ರಿ ಅವರು ಸ್ಪಂದಿಸುತ್ತಾರೆ ಎಂಬ ನಂಬಿಕೆ ಇದೆ ಎಂದು ಸಚಿವ ಎಚ್.ಕೆ.ಪಾಟೀಲ ಹೇಳಿದರು.

## ಕನ್ನಡ ರಾಜ್ಯೋತ್ಸವ 'ಕರ್ನಾಟಕ ಸುವರ್ಣ ಸಂಭ್ರಮ'ದ ನಿಮಿತ್ತ ಕಾರ್ಯಕ್ರಮ

# ಕರ್ನಾಟಕ ಜ್ಯೋತಿ ಯಾತ್ರೆ ರಥಕ್ಕೆ ಅದ್ದೂರಿ ಸ್ವಾಗತ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

68ನೇ ಕನ್ನಡ ರಾಜ್ಯೋತ್ಸವ ಹಾಗೂ ಕರ್ನಾಟಕ ಸುವರ್ಣ ಮಹೋತ್ಸವದ ಕರ್ನಾಟಕ ಸಂಭ್ರಮ ಪ್ರಯುಕ್ತ ಹಂಪಿಯಿಂದ ಆಗಮಿಸಿದ ಕರ್ನಾಟಕ ಜ್ಯೋತಿ ಯಾತ್ರೆಯ ರಥವನ್ನು ಗ್ರಾಮಸ್ಥರು ಅದ್ದೂರಿಯಾಗಿ ಸ್ವಾಗತಿಸಿದರು.

ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್ ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ ಅವರು ಜ್ಯೋತಿ ಯಾತ್ರೆಯ ಭುವನೇಶ್ವರಿ ದೇವಿಗೆ ಹೂಮಾಲೆ ಹಾಕಿ ಸ್ವಾಗತಿಸಿದರು. ಗ್ರಾ.ಪಂ ಮಹಿಳಾ ಸದಸ್ಯರು, ಸ್ತ್ರೀಶಕ್ತಿ ಸಂಘದ ಸದಸ್ಯರು ಸಂಪ್ರದಾಯದಂತೆ ಆರತಿ ಬೆಳಗಿದರು. ಸ್ವಾಗತ ಮೆರವಣಿಗೆಯು ಪಂಚಾಯಿತಿಯಿಂದ ಪ್ರಮುಖ ಬೀದಿಯಲ್ಲಿ ಅಕ್ಕಮಹಾದೇವಿ ಮಹಿಳಾ ತಂಡದ ಡೊಳ್ಳು ಕುಣಿತದೊಂದಿಗೆ ಎಂಕೆಬಿಎಸ್ ಶಾಲೆಯವರೆಗೂ ಸಾಗಿದ ನಂತರ ಗದಗ ನಗರಕ್ಕೆ ಬೀಳ್ಕೊಡಲಾಯಿತು.

ಶಾಲಾ ಮಕ್ಕಳು ಕನ್ನಡ ಧ್ವಜವನ್ನು ಹಿಡಿದು ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಕರ್ನಾಟಕ ಎಂಬ ಹೆಸರು ನಾಮಕರಣವಾಗಿ 50 ವರ್ಷವಾಗಿದ್ದು ಕನ್ನಡದ ನೆಲ, ಜಲ, ಭಾಷೆಗಾಗಿ ಹೋರಾಡಿದ ಗದಗ ಜಿಲ್ಲೆಯ ಹಲವಾರು ವ್ಯಕ್ತಿಗಳ ಸೇವೆ ಇದರಲ್ಲಿ ಪ್ರಮುಖವಾಗಿದೆ. ಅವರನ್ನು ಸ್ಮರಿಸುವ ಸಲುವಾಗಿ ಈ 50 ವರ್ಷಗಳ ಕನ್ನಡ ಸಂಭ್ರಮವನ್ನು ಆಚರಿಸುತ್ತಿರುವುದು ನಮ್ಮೆಲ್ಲರಿಗೂ ಹೆಮ್ಮೆ ತಂದಿದೆ ಎಂದರು.

ಜಿ.ಪಂ ಮಾಜಿ ಅಧ್ಯಕ್ಷ ಸಿದ್ದಲಿಂಗೇಶ್ವರ ಪಾಟೀಲ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎಸ್. ಉಮಚಗಿ, ನಜೀರಅಹ್ಮದ ಕಿರಿಟಗೇರಿ, ವೀರಯ್ಯ ಗಂಧದ, ಸಿ.ಎಸ್. ಪಾಟೀಲ, ಗ್ರಾ.ಪಂ ಸದಸ್ಯರಾದ ರುದ್ರಪ್ಪ ಮುಸ್ಕಿನಭಾವಿ, ಪೀರಸಾಬ ನದಾಫ, ಕುಬೇರಪ್ಪ ಬೆಂತೂರು, ಲಕ್ಷ್ಮಣ ಗುಡಸಲಮನಿ, ರಮೇಶ ಭಾವಿ, ಅನಸಮ್ಮ ಅಂಬಕ್ಕಿ, ಲಲಿತಾ ಗದಗಿನ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್.ಎಸ್. ಜನಗಿ, ಪಿಡಿಓ ರಾಜಕುಮಾರ ಭಜಂತ್ರಿ, ಕಾರ್ಯದರ್ಶಿ ಪ್ರದೀಪ ಆಲೂರು ಸೇರಿದಂತೆ ಶಾಲಾ-ಕಾಲೇಜುಗಳ ಶಿಕ್ಷಕರು, ಸಂಘ-ಸಂಸ್ಥೆಗಳ ಸದಸ್ಯರು, ಗ್ರಾಮದ ಗುರು-ಹಿರಿಯರು ಪಾಲ್ಗೊಂಡಿದ್ದರು.



# ಕನ್ನಡಿಗರು ಸ್ವಾಭಿಮಾನದ ಕಲಿಗಳು



■ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲಿಯೇ ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಪಡೆದ ಭಾಷೆ ಕನ್ನಡ. ಕನ್ನಡದ ಲಿಪಿ ವಿಶ್ವದಲ್ಲಿಯೇ ಪ್ರಖ್ಯಾತವಾಗಿದೆ. ಅದಕ್ಕೆ ಅದನ್ನು ವಿಶ್ವದ ಭಾಷೆಗಳ ರಾಣಿ ಎಂದು ಭೂದಾನ ಚಳುವಳಿಯ ನೇತಾರ ಆಚಾರ್ಯ ವಿನೋಭಾ ಭಾವೆ ಹೇಳಿದ್ದಾರೆ. ಏನು ಮಾತನಾಡುತ್ತೇವೆಯೋ ಅದನ್ನೆ ಬರೆಯುತ್ತೇವೆ, ಅದನ್ನೇ ಉಚ್ಛರಿಸುತ್ತೇವೆ. ಈ ವೈಶಿಷ್ಟ್ಯತೆ ನಮ್ಮ ಕನ್ನಡದಲ್ಲಿ ಮಾತ್ರ ಇದೆ. ಕನ್ನಡಿಗರು ಸ್ವಾಭಿಮಾನದ ಕಲಿಗಳು ಎಂದು ಪ್ರಾ. ಎಲ್.ಎಸ್. ಪಾಟೀಲ ಹೇಳಿದರು.

ಅವರು ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ ಮತ್ತು ಸ್ನಾತಕೋತ್ತರ ಕೇಂದ್ರದಲ್ಲಿ ಕನ್ನಡ ರಾಜ್ಯೋತ್ಸವ ಅಂಗವಾಗಿ ತಾಯಿ ಭುನೇಶ್ವರಿ ದೇವಿಗೆ ಪುಷ್ಪಾರ್ಪಣೆ ಸಲ್ಲಿಸಿ ಮಾತನಾಡಿದರು.

ಕಾರ್ಯಕ್ರಮವನ್ನು ಜಿ.ಎಫ್. ಕಾಯಕದ ನಿರೂಪಿಸಿದರು. ದೈಹಿಕ ನಿರ್ದೇಶಕ ಶಶಿಕಾಂತ ಕೊರ್ಲಹಳ್ಳಿ ನಿರ್ವಹಿಸಿದರು. ಎಂ.ಸಿ. ಅಬ್ಬಿಗೇರಿ ವಂದಿಸಿದರು ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಉಪನ್ಯಾಸಕರಾದ ಪ್ರೊ. ಎಸ್.ಜಿ. ಉಳಿಗೇರ, ಪ್ರೊ. ಎಸ್.ಎಂ. ಮಡಿವಾಳರ, ಪ್ರೊ. ಬಿ.ಸಿ. ಜೋಗೀನ, ಪ್ರೊ. ವಿ.ಪಿ. ಬಿಂಕದಕಟ್ಟಿ, ಪ್ರೊ. ಎಸ್.ಎ. ಸಂಗನಾಳ, ಪ್ರೊ. ವಸಂತ ಮೂಲಿಮನಿ, ಪ್ರೊ. ಮಾರುತಿ ಮಡ್ಡಿ, ಪ್ರೊ. ಎಂ.ಡಿ. ಮಾದರ, ಪ್ರೊ. ಎಂ.ಡಿ. ಮಾದರ, ನಂದಿತಾ ಗೋಟೂರ, ಎನ್.ವಿ. ರಾಠೋಡ, ಪ್ರೊ. ಆರ್.ಬಿ. ಕಟ್ನಳ್ಳಿ, ಪ್ರೊ. ಎಸ್.ಎನ್. ಶ್ಯಾಗೋಟಿ, ಪ್ರೊ. ಡಿ.ಎಂ. ಡಂಕೇದ, ಪ್ರೊ. ಆರ್.ಬಿ. ಹುಚ್ಚಣ್ಣವರ ಮುಂತಾದವರು ಭಾಗವಹಿಸಿದ್ದರು.

## ಕರ್ನಾಟಕ ಸಂಭ್ರಮ -50: ಕಾರ್ಯಕ್ರಮದಲ್ಲಿ ಸಭಾಧ್ಯಕ್ಷ ಯು.ಟಿ. ಖಾದರ

# ಕರ್ನಾಟಕ ಸರ್ವಜನಾಂಗದ ಶಾಂತಿಯ ತೋಟವಾಗಿಸಲು ಶ್ರಮಿಸೋಣ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕವನ್ನು ಸರ್ವ ಜನಾಂಗದ ಶಾಂತಿಯ ತೋಟವಾಗಿ ಮುಂದುವರಿಯಲು ಎಲ್ಲರೂ ಶ್ರಮಿಸಬೇಕು ಎಂದು ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ. ಖಾದರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಶುಕ್ರವಾರ ಜರುಗಿದ ಮೈಸೂರು ರಾಜ್ಯಕ್ಕೆ ಕರ್ನಾಟಕ ಮರುನಾಮಕರಣ ಸುವರ್ಣ ಮಹೋತ್ಸವದ ಕರ್ನಾಟಕ ಸಂಭ್ರಮ-50 ಸಮಾರಂಭದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕರ್ನಾಟಕ ಸುವರ್ಣ ಮಹೋತ್ಸವ ಆಚರಿಸುತ್ತಿರುವ ಈ ಶುಭಗಳಿಗೆ ಹೆಮ್ಮೆಯ ವಿಷಯವಾಗಿದೆ. ಅನೇಕ ಜನರ ತ್ಯಾಗ ಬಲಿದಾನ ಹಾಗೂ ಸಹಕಾರದಿಂದ ಕರ್ನಾಟಕ ರೂಪುಗೊಂಡಿದೆ ಎಂಬ ಸಂಗತಿಯನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು. ನಾಡಿನ ಸರ್ವ ಜನಾಂಗದ ಜನರು ಪರಸ್ಪರ ಶಾಂತಿ ನೆಮ್ಮದಿಯಿಂದ ಬಾಳುವಂತಾಗಬೇಕು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಮಾತನಾಡಿ, ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವ ಆಚರಣೆ ನಿಮಿತ್ತ ನವೆಂಬರ್ 1 ರಿಂದ ಮುಂದಿನ ವರ್ಷ ಅಕ್ಟೋಬರ್ 31 ರವರೆಗೆ ರಾಜ್ಯಾದ್ಯಂತ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯವೆಂದು ನಾಮಕರಣಗೊಂಡು 50 ವರ್ಷ ಪೂರೈಸಿದ ಸವಿನೆನಪಿಗಾಗಿ ರಾಜ್ಯ ಸರ್ಕಾರವು ಅಂಚೆ ಚೀಟಿ ಹಾಗೂ ನಾಣ್ಯಗಳನ್ನು ಬಿಡುಗಡೆಗೊಳಿಸಲು ನಿರ್ಧರಿಸಿದೆ. ಕನ್ನಡ ನಾಡು ನುಡಿ ಜಲ ವಿಷಯ ಸೇರಿದಂತೆ ಕನ್ನಡಿಗರ ಅಭಿಮಾನ ಹೆಚ್ಚಿಸುವ ಕಾರ್ಯಕ್ರಮಗಳನ್ನು ವರ್ಷಪೂರ್ತಿ ನಡೆಸಲಾಗುವುದು ಎಂದರು. 1973ರಲ್ಲಿ ಮೈಸೂರು ರಾಜ್ಯ ಕರ್ನಾಟಕ ರಾಜ್ಯವೆಂದು ನಾಮಕರಣಗೊಂಡಿತು. ಅಂದಿನ ಮುಖ್ಯಮಂತ್ರಿ ದಿ. ದೇವರಾಜ ಅರಸ್ ಹಾಗೂ ಮಾಜಿ ಸಚಿವ ದಿ. ಕೆ ಎಚ್ ಪಾಟೀಲ ಅವರ ನೇತೃತ್ವದಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ರಾಜ್ಯ ಎಂದು ನಾಮಕರಣ ಎಂದು ಗದಗ ನಗರದಲ್ಲಿ ಠರಾವು ಪಾಸು ಮಾಡಿದ್ದು ಇತಿಹಾಸದಲ್ಲಿದೆ. ಕರ್ನಾಟಕ ನಾಮಕರಣಕ್ಕೆ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಅನೇಕ ಸಾಧಕರಿಗೆ ಸನ್ಮಾನಿಸಲಾಗಿದೆ. ಜೊತೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕುಮಾರಸವ್ಯಾಸ ರಚಿತ ಗದುಗಿನ ಭಾರತ ಪುಸ್ತಕವನ್ನು ಮರುಮುದ್ರಿಸಿ ಕಡಿಮೆ ದರದಲ್ಲಿ ಜನರಿಗೆ ನೀಡಲಾಗುವುದು. ಡಿಜಿಟಲೀಕರಣಕ್ಕೆ ಆದ್ಯತೆ ನೀಡಲಾಗುವುದು. ಕನ್ನಡದ ಕೈಂಕರ್ಯ ಮಾಡುವಂತಹ ಅವಕಾಶ ಸಿಕ್ಕಿರುವ ನಾನೇ ಪುಣ್ಯವಂತ ಎಂದು ಹೇಳಿದರು.

ಈ ಸಂದರ್ಭದಲ್ಲಿ ವೇದಿಕೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಕಂದಾಯ ಸಚಿವ ಕೃಷ್ಣಭೈರೇಗೌಡ, ಪೌರಾಡಳಿತ ಸಚಿವ ರಹೀಂಖಾನ್, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ, ಜವಳಿ ಮತ್ತು ಸಕ್ಕರೆ ಸಚಿವ ಶಿವಾನಂದ ಪಾಟೀಲ್, ಮೀನುಗಾರಿಕೆ ಸಚಿವ ಮಂಕಾಳ ವೈದ್ಯ, ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ವಿಧಾನ ಪರಿಷತ್ ಉಪ ಸಭಾಪತಿ ರುದ್ರಪ್ಪ ಲಮಾಣಿ, ಶಾಸಕರಾದ ಜಿ.ಎಸ್.ಪಾಟೀಲ್, ಶ್ರೀನಿವಾಸ ಮಾನೆ, ಎಸ್.ವಿ.ಸಂಕನೂರು,ಬಸವರಾಜ ಶಿವಣ್ಣವರ, ಜೆ.ಟಿ.ಪಾಟೀಲ್, ಎನ್.ಎಚ್.ಕೊನರಡ್ಡಿ, ಮಾಜಿ ಲೋಕಸಭಾ ಸದಸ್ಯ ಮಂಜುನಾಥ ಕುನ್ನೂರ, ಐ.ಜಿ.ಸನದಿ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಮಾಜಿ ಶಾಸಕರುಗಳಾದ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದ್ದೇವರಮಠ,ಬಿ.ಆರ್. ಯಾವಗಲ್, ರಾಮಣ್ಣ ಲಮಾಣಿ, ನಂಜಯ್ಯನಮಠ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಹಲವು ಮುಖಂಡರು ಬಾಗಿಯಾಗಿದ್ದರು.

# ಏಕೀಕರಣ, ಕರ್ನಾಟಕ ನಾಮಕರಣದಲ್ಲಿ ಗದಗ ಜಿಲ್ಲೆಯ ಕೊಡುಗೆ ಅನನ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಏಕೀಕರಣ ಹಾಗೂ ಮೈಸೂರು ರಾಜ್ಯಕ್ಕೆ ಕರ್ನಾಟಕವೆಂದು ನಾಮಕರಣ ಮಾಡುವ ವಿಷಯದಲ್ಲಿ ಗದಗ ಜಿಲ್ಲೆಯ ನೀಡಿರುವ ಕೊಡುಗೆ ಅನನ್ಯ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ ಹೇಳಿದರು.

ಗದಗ ಜಿಲ್ಲೆ ಕಲೆ ಸಾಹಿತ್ಯ ಸಂಗೀತ ಹಾಗೂ ಸಹಕಾರ ರಂಗದ ತವರು ನೆಲ. ಇಲ್ಲಿನ ಅನೇಕ ಮಹನೀಯರು ರಾಜ್ಯದ ಅಭಿವೃದ್ಧಿ ಮತ್ತು ಬೆಳವಣಿಗೆಗೆ ವಿಶಿಷ್ಟ ಸೇವೆ ಸಲ್ಲಿಸಿದ್ದಾರೆ ಎಂದರು.

ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ನಾಮಕರಣ ಮಾಡುವ ಸಮಯದಲ್ಲೂ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿತ್ತು. ಅಂದಿನ ಸಿಎಂ ದೇವರಾಜ ಅರಸ್ ಹಾಗೂ ಸಚಿವರಾಗಿದ್ದ ಗದಗ ಕ್ಷೇತ್ರದ ಶಾಸಕ ಕೆ ಎಚ್ ಪಾಟೀಲ ಅವರು ನಾಮಕರಣ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಅದರಂತೆ ಕರ್ನಾಟಕ 50 ವರ್ಷ ಪೂರೈಸಿದ ಸುಸಂದರ್ಭದಲ್ಲಿ ನಿಮ್ಮೆಲ್ಲರ ಪ್ರೀತಿ ಬೆಂಬಲದಿಂದ ಸುವರ್ಣ ಮಹೋತ್ಸವ ಆಚರಿಸುವ ಅವಕಾಶವೂ ಕಾಂಗ್ರೆಸ್ ಗೆ ಸಿಕ್ಕಿದೆ. ಅನುಭವ ಮಂಟಪದಂತಿರುವ ಕಾಂಗ್ರೆಸ್ ಪಕ್ಷ ಸದಾ ಜನರು ಹಾಗೂ ರಾಜ್ಯದ ಏಳ್ಗೆಯನ್ನು ಬಯಸುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳು ಜನರಿಗೆ ಅನುಕೂಲವಾಗಿವೆ. ಒಟ್ಟಾರೆ ರಾಜ್ಯದಲ್ಲಿ ಶಾಂತಿ ನೆಮ್ಮದಿ ನೆಲಸಬೇಕು. ರಾಜ್ಯವನ್ನು ಮಾದರಿ ರಾಜ್ಯವನ್ನಾಗಿ ಮಾಡುವ ನಮ್ಮ ಸಂಕಲ್ಪದಂತೆ ಆಡಳಿತ ನಡೆಸುತ್ತೇವೆ ಎಂದು ಅವರು ಹೇಳಿದರು.

ಕವಿ ನಿಸಾರ್ ಅಹ್ಮದ ಹಾಗೂ ಪುರಂದಾಸರ ಕವನಗಳನ್ನು ವಿವರಿಸಿದ ಡಿಸಿಎಂ ಡಿ ಕೆ ಶಿವಕುಮಾರ ಅವರು ಹಿರಿಯ ರಾಜಕಾರಣಿ ಎಚ್ ಕೆ ಪಾಟೀಲ ಅವರಿಂದ ಗದಗ ಜಿಲ್ಲೆ ಸಾಕಷ್ಟು ಅಭಿವೃದ್ಧಿ ಹೊಂದಿದೆ. ಶುದ್ಧ ಘಟಕ ಇರಬಹುದು, ನೀರಾವರಿ ಯೋಜನೆಗಳು, ಆರ್ ಡಿಪಿಆರ್ ವಿಶ್ವವಿದ್ಯಾಲಯ, ಮಾದರಿ ಸಬರಮತಿ ಆಶ್ರಮ ಹೀಗೆ ಹತ್ತು ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ ಎಂದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ.ಬಿ.ಆರ್.ಅಂಬೇಡ್ಕರ ಅಭಿವೃದ್ಧಿ ನಿಗಮ / ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ/ ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮ/ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ/ ಕರ್ನಾಟಕ ತಾಂಡಾ ಅಬಿವೃದ್ಧಿ ನಿಗಮ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಆರ್ಥಿಕ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ ( ಪ್ರೇರಣಾ )ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆಗಳ ಸೌಲಭ್ಯ ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಾರ್ಯಾಲಯ, ಜಿಲ್ಲಾ ಆಡಳಿತ ಭವನ, 1 ನೇ ಮಹಡಿ ರೂಂ ನಂ. 122/5 ಗದಗ ಇವರನ್ನು ಸಂಪರ್ಕಿಸಬಹುದಾಗಿದೆ. ಅಥವಾ ನಿಗಮದ ವೆಬ್‌ಸೈಟ್ ಅಥವಾ ಕಲ್ಯಾಣ ಮಿತ್ರ ಏಕೀಕೃತ ಎಸ್.ಸಿ./ಎಸ್.ಟಿ. ಸಹಾಯವಾಣಿ 9482300400 ಸಂಪರ್ಕಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ನವೆಂಬರ್ 29 ಕೊನೆಯ ದಿನವಾಗಿದ್ದು, ಅರ್ಜಿಯನ್ನು https://sevasindhu.karnataka.gov.in ವೆಬ್ ಸೈಟ್ ಮೂಲಕ ಸಲ್ಲಿಸಬಹುದು. ನಿಗಮದ ನಿರ್ದೇಶಕರ ಮಂಡಳಿ ವಿವೇಚನಾ ಕೋಟಾ ಅಥವಾ ಸರ್ಕಾರದ ಸಾಂಸ್ಥಿಕ ಕೋಟಾದಡಿ ಸ್ವೀಕರಿಸುವ ಅರ್ಜಿಗಳನ್ನು ಸಹ ಸೇವಾ ಸಿಂಧು ಪೋರ್ಟಲ್ ಮೂಲಕವೇ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

# ವಿವಿಧ ಉಪಘಟಕದಡಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಬಡತನ ರೇ-ಖೆಗಿಂತ ಕೆಳಗಿರುವ ಕುಟುಂಬಗಳಿಗೆ ತಿಳಿಸುವುದೇನೆಂದರೆ 2023-24ನೇ ಸಾಲಿನ ರಾಷ್ಟ್ರೀಯ ನಗರ ಜೀವನೋಪಾಯ ರಾಜ್ಯ ಅಭಿಯಾನ ಯೋಜನೆಯಡಿ ವಿವಿಧ ಉಪ ಘಟಕದಡಿ ಎಸ್.ಇ.ಪಿ.ಐ ಮತ್ತು ಎಸ್.ಇ.ಪಿ.ಜಿ. ಸ್ವಯಂ ಉದ್ಯೋಗ ಕಾರ್ಯಕ್ರಮಕ್ಕೆ ಬಡ್ಡಿ ಸಹಾಯಧನ, ಸ್ವ ಸಹಾಯ ಗುಂಪು ರಚನೆ ಹಾಗೂ ಬ್ಯಾಂಕ್ ಲಿಂಕೇಜ್‌ಗೆ ಗುರಿ ನಿಗದಿಪಡಿಸಿದ್ದು, 18 ರಿಂದ 45 ವರ್ಷ ವಯೋಮಿತಿಯುಳ್ಳ ಆಸಕ್ತರು ಅರ್ಜಿ ಸಲ್ಲಿಸಬಹುದು. ಈ ಹಿಂದೆ ಪಟ್ಟಣ ಪಂಚಾಯತಿ ವತಿಯಿಂದ ಸದರಿ ಯೋಜನೆಯಡಿ ಸೌಲಭ್ಯ ಪಡೆದಿರಬಾರದು. ಅರ್ಜಿಯನ್ನು ಸಲ್ಲಿಸಲು ನವೆಂಬರ್ 15 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಶಿರಹಟ್ಟಿ ಪಟ್ಟಣ ಪಂಚಾಯತಿ ಕಾರ್ಯಾಲಯದ ಡೇ ನಲ್ಮ ವಿಭಾಗದಲ್ಲಿ ಸಂಪರ್ಕಿಸಬಹುದಾಗಿದೆ.

# ಮಾಜಿ ಸೈನಿಕರಿಂದ ಆಕರ್ಷಕ ಪಥ ಸಂಚಲನ

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಜರುಗಿದ 68ನೇ ಕರ್ನಾಟಕ ರಾಜ್ಯೋತ್ಸವ ಸಂಭ್ರಮಾಚರಣೆಯಲ್ಲಿ ಮಾಜಿ ಸೈನಿಕರ, ಪೊಲೀಸ್ ಹಾಗೂ ಎನ್‌ಸಿಸಿ ವಿದ್ಯಾರ್ಥಿಗಳ ಪಥಸಂಚಲನ ಕಾರ್ಯಕ್ರಮ ಗಮನ ಸೆಳೆಯಿತು.

ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ಅವರ ನೇತೃತ್ವದಲ್ಲಿ 22 ಜನ ಅಖಿಲ ಕರ್ನಾಟಕ ಮಾಜಿ ಸೈನಿಕರು ಪಾಲ್ಗೊಂಡು ಪಥ ಸಂಚಲನ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು. ಈ ಎಲ್ಲ ಮಾಜಿ ಸೈನಿಕರಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಸಂಘದ ಜಿಲ್ಲಾಧ್ಯಕ್ಷರಾದ ಬಸಲಿಂಗಪ್ಪ ಮುಂಡರಗಿ ಮತ್ತು ತಂಡದ ಎಲ್ಲಾ ಮಾಜಿ ಸೈನಿಕರನ್ನು ವೇದಿಕೆಯ ಮೇಲೆ ಬರಮಾಡಿಕೊಂಡು ಪ್ರಶಸ್ತಿಪತ್ರ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಅಲೆಮಾರಿ ಸಮುದಾಯದವರಿಗೆ ಆರ್ಥಿಕ ಅಭಿವೃದ್ಧಿಯನ್ನು ಹೊಂದಲು ಸ್ವಯಂ ಉದ್ಯೋಗ ( ನೇರ ಸಾಲ) ಯೋಜನೆ, ಉದ್ಯಮಶೀಲತಾ ಯೋಜನೆ, ಭೂ ಒಡೆತನ ಯೋಜನೆ , ಪರಿಶಿಷ್ಟ ಪಂಗಡದವರಿಗೆ ಭೂ ಒಡೆತನ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆಗಳಿಗೆ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಫಲಾಪೇಕ್ಷಿಗಳು ಸೇವಾಸಿಂಧು ಪೋರ್ಟಲ್ ಮೂಲಕ ಕರ್ನಾಟಕ ಒನ್, ಗ್ರಾಮ ಒನ್‌ಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ನವೆಂಬರ್ 30 ರೊಳಗಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಗದಗ ಜಿಲ್ಲಾಡಳಿತ ಭವನ ರೂಂ ನಂ. 122/1/ಎ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ 08372-231828 ಸಂಪರ್ಕಿಸಬಹುದಾಗಿದೆ.

# ಕನ್ನಡ ರಥದ ಮೆರವಣಿಗೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಎಚ್.ಕೆ. ಪಾಟೀಲ ಹಾಗೂ ಸಚಿವರ ದಂಡು

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು "ಕನ್ನಡ ಸಂಭ್ರಮ-50" ರ ಅದ್ದೂರಿ ಕಾರ್ಯಕ್ರಮಕ್ಕಾಗಿ ಗದಗ ಪ್ರವೇಶಿಸಿ ವೀರನಾರಾಯಣ ದೇವಸ್ಥಾನದಲ್ಲಿ ನಾರಾಯಣನ ದರ್ಶನ ಪಡೆದರು.

ಬಳಿಕ ಕನ್ನಡ ರಥದ ಮೆರವಣಿಗೆಯಲ್ಲಿ ಸಹಸ್ರ ಸಹಸ್ರ "ಅರಿಶಿನ-ಕುಂಕಮ" ಬಣ್ಣದ ಬಾವುಟಗಳು, ಕಲಶಗಳು ಮತ್ತು ಕನ್ನಡ ಶಾಲುಗಳನ್ನು ಹೊದ್ದ ಕನ್ನಡ ಕಾರ್ಯಕರ್ತರ ಜಯಘೋಷಗಳ ನಡುವೆ ಮೆರವಣಿಗೆಯಲ್ಲಿ ತೆರಳಿದರು.

ಗದಗಿನ ಮುಖ್ಯರಸ್ತೆಗಳಲ್ಲಿ ಸಾಗಿದ ಕನ್ನಡ ರಥವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಭಿಮಾನಿಗಳು, ಕಾರ್ಯಕರ್ತರು ಹೂಮಳೆಗರೆದು ಸ್ವಾಗತಿಸಿದರು.

ಹಾದಿಯುದ್ದಕ್ಕೂ ಮನೆಗಳ ಮುಂದೆ ಕನ್ನಡದ ರಂಗೋಲಿ, ಬಾವುಟಗಳು ಕಣ್ಣನ ಸೆಳೆಯುತ್ತಿದ್ದರೆ ಮಹಿಳೆಯರು, ಮಕ್ಕಳು ರಥಕ್ಕೆ ಹೂಮಳೆ ಗರೆಯುತ್ತಾ, ರಥದ ಚಕ್ರಗಳಿಗೆ ಹಣ್ಣು ಕಾಯಿ, ಹಾಲಿನ ಅಭಿಷೇಕ ನಡೆಸುತ್ತಿದ್ದಾರೆ.

ಡಿಸಿಎಂ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಹೆಚ್. ಕೆ.ಪಾಟೀಲ್, ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ಮಂಕಳ ವೈದ್ಯ ಸೇರಿ ಹಲವು ಮುಖಂಡರು ಮೆರವಣಿಗೆಯಲ್ಲಿದ್ದರು.











VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka